# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 218 | Volume - 01 Issue - 218
ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | Title- Code: KARKAN 28269
ಚಿತ್ರದುರ್ಗ | Chitradurga
ದಿನಾಂಕ: 16–03–2024 ಶನಿವಾರ | Date: 16-03-2024 Saturday
ಪುಟ: 4 | Page: 4
ಬೆಲೆ : ರೂ.2–00 | Price: Rs. 2-00



ಒಳಪುಟದ ಸುದ್ದಿಗಳು

ಎಸ್ಎಸ್ಎಲ್‌ಸಿ ಪರೀಕ್ಷೆ ಪಾವಿತ್ರ್ಯತೆ ಹಾಗೂ ನೈತಿಕತೆ ಕಾಪಾಡಿ 2

ಅರ್ಹ ಫಲಾನುಭವಿಗಳಿಗೆ ಯೋಜನೆಯ ಲಾಭ ದೊರೆಯಲಿ: ಪ್ರಾಧಿಕಾರದ ಅಧ್ಯಕ್ಷ 3

ಬೋರ್‌ವೆಲ್ ಕೊರೆಯಲು ಏಕರೂಪ ದರ ನಿಗದಿ: ಜಿಲ್ಲಾಧಿಕಾರಿ ವೆಂಕಟೇಶ್ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಬಿಜೆಪಿ ಭಿನ್ನಮತ ಶೀಘ್ರ ಶಮನ: ಬೊಮ್ಮಾಯಿ

» **ಚಿತ್ರದುರ್ಗ**

ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹಾಗೂ ಮಾಜಿ ಸಚಿವ ಸಿ.ಸಿ.ಪಾಟಿಲ್ ನಗರದ ಮಾದಾರ ಚನ್ನಯ್ಯ ಗುರುಪೀಠಕ್ಕೆ ಶುಕ್ರವಾರ ಭೇಟಿ ನೀಡಿ ಮಾತುಕತೆ ನಡೆಸಿದರು.

ಬೆಳಗ್ಗೆ 11 ಗಂಟೆಗೆ ಮಠಕ್ಕೆಭೇಟಿ ನೀಡಿ, ಶ್ರೀಗಳ ಆಶೀರ್ವಾದ ಪಡೆದ ಬೊಮ್ಮಾಯಿ, ಮಠದಲ್ಲೇ ಉಪಹಾರ ಸೇವಿಸಿ ಸುಧೀರ್ಘ ಸಮಾಲೋಚನೆ ನಡೆಸಿದರು. ಈ ವೇಳೆ ಹಾವೇರಿ ಕ್ಷೇತ್ರದ ಹಲವು ಮುಖಂಡರು ಮಠದಲ್ಲಿ ಇದ್ದು, ಶ್ರೀಗಳು ಹಾಗೂ ಬೊಮ್ಮಾಯಿ ಅವರ ಜೊತೆಗೆ ಚರ್ಚೆ ನಡೆಸಿದ್ದಾರೆ.

ನಂತರ ಮಾಧ್ಯಮಗಳೊಂದಿಗೆ ಮಾತಾಡಿದ ಮಾಜಿ ಸಿಎಂ ಬಸವರಾಜ್ ಬೊಮ್ಮಾಯಿ ಅವರು, ಚಿತ್ರದುರ್ಗದ ಟಿಕೆಟ್ ಇಷ್ಟರಲ್ಲೆ ಘೋಷಣೆಯಾಗಲಿದೆ. ಶ್ರೀ ಮಠಕ್ಕೆ ಆಗಾಗ್ಗೆ ಭೇಟಿ ಕೊಡುತ್ತಿರುತ್ತೇನೆ. ಹಾಗೆ ಇಂದು ಕೊಟ್ಟಿದ್ದೇನೆ. ಈ ಮೊದಲು ಚುನಾವಣೆ ಪೂರ್ವದಲ್ಲಿ ಆಶೀರ್ವಾದ ಪಡೆದುಕೊಂಡಿದ್ದೆ ಎಂದರು.

ಚಿತ್ರದುರ್ಗದ ಟಿಕೆಟ್ ಘೋಷಣೆಯಾಗುವುದು ಬಾಕಿ ಇದೆ.



ದೆಹಲಿಯಲ್ಲಿ ರಾಷ್ಟ್ರೀಯ ಅಧ್ಯಕ್ಷರು, ಪ್ರಧಾನಿಗಳು ಹಾಗೂ ಬೋರ್ಡ್ ಕಮಿಟಿಯ ಸಭೆ ನಡೆಯಲಿದೆ. ಒಂದೆರಡು ದಿನದಲ್ಲಿ ಉಳಿದ ಎಲ್ಲಾ ಸ್ಥಾನಗಳ ಟಿಕೆಟ್ ಮತ್ತು ಅಭ್ಯರ್ಥಿಗಳ ಘೋಷಣೆಯಾಗಲಿದೆ ಎಂದರು.ಮಾದಾರ ಚನ್ನಯ್ಯ ಶ್ರೀಗಳ ಹೆಸರು ಕೇಳಿ ಬರುತ್ತಿದೆ ಎಂಬ ಪ್ರಶ್ನೆಗೆ, ಯಾವುದೇ ಚರ್ಚೆ ಆಗುತ್ತಿಲ್ಲ. ಇದರ ಬಗ್ಗೆ ನನಗೆ ಮಾಹಿತಿ ಇಲ್ಲ. ಚಿತ್ರದುರ್ಗದಲ್ಲಿ ಹಾಲಿ ಸಂಸದರಿಗೆ ಟಿಕೆಟ್ ಕೊಡದೆ ಹೊಸಬರಿಗೆ ಟಿಕೆಟ್ ಕೊಡುವ ವಿಚಾರ ಕೇವಲ ಊಹಾ ಪೋಹ ಅಧಿಕೃತವಾಗಿ ಟಿಕೆಟ್ ಘೋಷಣೆ ಮಾಡಿದ ಮೇಲೆಯೇ ಅದು ಗೊತ್ತಾಗಲಿದೆ. ಈಶ್ವರಪ್ಪ ಹಾಗೂ ಹಾವೇರಿ, ದಾವಣಗೆರೆಯಲ್ಲಿ ಭಿನ್ನಮತ ವಿಚಾರವಾಗಿ ಅವರ ಜೊತೆಗೆ ನಾನು ವರಿಷ್ಠರು ಮಾತಾಡಿದ್ದೇವೆ ಎಲ್ಲವೂ ಸರಿಯಾಗಲಿದೆ ಎಂದರು.

ಶ್ರೀಮಠದ ಬೆಂಬಲ ಕೋರಿ ನಾನು ಬಂದಿಲ್ಲ. ನಾನು 35 ವರ್ಷ ರಾಜಕಾರಣ ಮಾಡಿದ್ದೇನೆ. ಗ್ರಾಮ ಪಂಚಾಯಿತಿಗಳ ಮಟ್ಟದಲ್ಲಿ ಭೇಟಿ ಮಾಡಿದ್ದೇನೆ. ಎರಡು ಬಾರಿ ವಿಧಾನ ಪರಿಷತ್ ಸದಸ್ಯನಾಗಿದ್ದೆ, ಈಗ ಎಂಪಿ ಟಿಕೆಟ್ ಕೊಟ್ಟಿದ್ದಾರೆ. ನಮ್ಮ ಪಕ್ಷದಲ್ಲಿ ನಿಷ್ಠಾವಂತರಿಗೆ ಟಿಕೆಟ್ ನೀಡಿದ್ದೇವೆ ಎಂದು ತಿಳಿಸಿದರು.

ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ವಿರುದ್ಧ ಪೋಕ್ಸೋ ಪ್ರಕರಣ ವಿಚಾರವಾಗಿ ಗೃಹ ಸಚಿವ ಪರಮೇಶ್ವರ್ ಹೇಳಿಕೆಯಲ್ಲಿ ದೂರು ನೀಡಿದ ಮಹಿಳೆ ಮಾನಸಿಕ ಅಸ್ವಸ್ಥೆ ಎಂದಿರುವುದರಿಂದ ಇದಕ್ಕೆ ಪ್ರಮುಖ್ಯತೆ ನೀಡುವ ಅವಶ್ಯಕತೆ ಇಲ್ಲ ಯಾವುದೇ ದೂರು ದಾಖಲಾದ ತಕ್ಷಣ ಕ್ರಮ ಕೈಗೊಳ್ಳಲಾಗದು, ಜವಬ್ದಾರಿಯಿಂದ ತನಿಖೆ ನಡೆಸಿ ಕ್ರಮ ಕೈಗೊಳ್ಳಲಾಗುವುದು ಎಂದು ಈಗಾಗಲೇ ಗೃಹ ಸಚಿವ ಡಾ. ಜಿ.ಪರಮೇಶ್ವರ್ ಹೇಳಿಕೆ ನೀಡಿದ್ದಾರೆ.

ಅವರು ಹೇಳಿಕೆ ಕೊಟ್ಟಿರುವುದು ಸರಿಯಾಗಿದೆ. ದೂರು ನೀಡಿದ ಮಹಿಳೆ ಈ ಹಿಂದೆ ಅನೇಕರ ಮೇಲೆ ಇದೇ ರೀತಿ ದೂರು ಕೊಟ್ಟಿದ್ದರೆಂದು ಹೇಳಿದ್ದಾರೆ. ರಾಜಕೀಯದಲ್ಲಿ ಹೆಸರಿಗೆ ಕಳಂಕ ತರುವ ಪ್ರಯತ್ನ ನಡೆಯುತ್ತವೆ. ಆದರೆ ಈ ಪ್ರಕರಣ ದಾಖಲಿಸಿದ ಹಿಂದೆ ಯಾವುದೇ ಸದುದ್ದೇಶ ಇಲ್ಲ. ಚುನಾವಣೆ ವೇಳೆ ಈ ರೀತಿ ಪ್ರಯತ್ನ ನಡೆಯುತ್ತಿರುತ್ತವೆ ಆದರೆ ಸತ್ಯಕ್ಕೆ ಜಯ ಸಿಗಲಿದೆ ಎಂದರು.

## ಫಾಸ್ಟ್ ನ್ಯೂಸ್

### ಭದ್ರಾ ಮೇಲ್ದಂಡೆ ಯೋಜನೆ: ಮುಖ್ಯ ಇಂಜಿನಿಯರ್ ಆಗಿ ಕೆ.ಎಂ. ಶಿವಪ್ರಕಾಶ್ ಅಧಿಕಾರ

» **ಚಿತ್ರದುರ್ಗ**

ಚಿತ್ರದುರ್ಗ ಭದ್ರಾ ಮೇಲ್ದಂಡೆ ಯೋಜನಾ ವಲಯದ ಮುಖ್ಯ ಇಂಜಿನಿಯರ್ ಹುದ್ದೆಯ ಸ್ವತಂತ್ರ ಪ್ರಭಾರವನ್ನು ಕೆ.ಎಂ. ಶಿವಪ್ರಕಾಶ್ ಶುಕ್ರವಾರ ಭದ್ರಾ ಮೇಲ್ದಂಡೆ ಯೋಜನಾ ವಲಯದ ಕಚೇರಿಯಲ್ಲಿ ವಹಿಸಿಕೊಂಡರು. ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತ, ಚಿತ್ರದುರ್ಗದ ಭದ್ರಾ ಮೇಲ್ದಂಡೆ ಯೋಜನಾ ವೃತ್ತದಲ್ಲಿ ಅಧೀಕ್ಷಕ ಅಭಿಯಂತರರಾಗಿ ಹಾಗೂ ಭದ್ರಾ ಮೇಲ್ದಂಡೆ ಯೋಜನೆಗೆ ಮುಖ್ಯ ಇಂಜಿನಿಯರ್ ಆಗಿ ಹೆಚ್ಚುವರಿ ಪ್ರಭಾರದಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಕೆ.ಎಂ. ಶಿವಪ್ರಕಾಶ್ ಅವರಿಗೆ ಸರ್ಕಾರವು ಭದ್ರಾ ಮೇಲ್ದಂಡೆ ಯೋಜನಾ ವಲಯದ ಮುಖ್ಯ ಇಂಜಿನಿಯರ್ ಹುದ್ದೆಯ ಸ್ವತಂತ್ರ ಪ್ರಭಾರ ವಹಿಸಿ ಅಧಿಸೂಚನೆ ಹೊರಡಿಸಿದ್ದು, ಇದರನ್ವಯ ಕೆ.ಎಂ. ಶಿವಪ್ರಕಾಶ್ ಅವರು ಶುಕ್ರವಾರದಂದು ಭದ್ರಾ ಮೇಲ್ದಂಡೆ ಯೋಜನಾ ವಲಯದ ಕಚೇರಿಯಲ್ಲಿ ಅಧಿಕಾರ ವಹಿಸಿಕೊಂಡರು.

### ಅಪಘಾತ ಪರಿಹಾರ: ಅಸಂಘಟಿತ ಕಾರ್ಮಿಕರಿಂದ ಅರ್ಜಿ

» **ಚಿತ್ರದುರ್ಗ**

ಕೇಂದ್ರ ಸರ್ಕಾರವು ಅಸಂಘಟಿತ ಕಾರ್ಮಿಕರ ಸಮಗ್ರ ರಾಷ್ಟ್ರೀಯ ದತ್ತಾಂಶ ಕ್ರೋಢಿಕರಿಸುವ ಉದ್ದೇಶದಿಂದ 379 ವರ್ಗಗಳ ಎಲ್ಲಾ ಅಸಂಘಟಿತ ಕಾರ್ಮಿಕರನ್ನು ಇ–ಶ್ರಮ ಪೋರ್ಟಲ್ ಮೂಲಕ 2021ರ ಆಗಸ್ಟ್ 26 ರಿಂದ ನೋಂದಾಯಿಸಲಾಗುತ್ತಿದ್ದು, 2022ರ ಮಾರ್ಚ್ 31 ರವರೆಗೆ ನೋಂದಣಿಯಾಗಿ ಮತ್ತು ಈ ದಿನಾಂಕದೊಳಗೆ ಅಪಘಾತಗೊಂಡ ಫಲಾನುಭವಿಗಳಿಗೆ ಪ್ರಧಾನ ಮಂತ್ರಿ ಸುರಕ್ಷಾ ಭೀಮಾ ಯೋಜನೆಯಡಿ ರೂ.2 ಲಕ್ಷಗಳ ಅಪಘಾತ ಪರಿಹಾರ ಒದಗಿಸಲಾಗುವುದು. ಈ ಸಂಬಂಧ ಅಸಂಘಟಿತ ಕಾರ್ಮಿಕರಿಂದ ಅರ್ಜಿ ಆಹ್ವಾನಿಸಲಾಗಿದೆ. ಮಾರ್ಚ್ 25 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.

ಅಪಘಾತದಿಂದ ಮರಣ ಹೊಂದಿದ್ದಲ್ಲಿ ಸಲ್ಲಿಸಬೇಕಾದ ದಾಖಲೆಗಳು: ಫಲಾನುಭವಿಯ ಆಧಾರ್ ಸಂಖ್ಯೆ, UAN ಕಾರ್ಡ್ (ಇ–ಶ್ರಮ್ ಕಾರ್ಡ್) ಸಂಖ್ಯೆ, ಮರಣ ಪ್ರಮಾಣ ಪತ್ರ, ಮರಣಕ್ಕೆ ಕಾರಣದ ವೈದ್ಯಕೀಯ ಪ್ರಮಾಣ ಪತ್ರ, ಎಫ್ಐಆರ್/ಪಂಚನಾಮ, In case claimant is minor, Guardian should produce certificate of guardianship issued by District Court while filling the claim.

ಅಪಘಾತದಿಂದ ಅಂಗವೈಕಲ್ಯ ಹೊಂದ್ದಲ್ಲಿ ಸಲ್ಲಿಸಬೇಕಾದ ದಾಖಲೆಗಳು: ಫಲಾನುಭವಿಯ ಆಧಾರ್ ಸಂಖ್ಯೆ, ಗಂಓ ಕಾರ್ಡ್ (ಇ–ಶ್ರಮ್ ಕಾರ್ಡ್) ಸಂಖ್ಯೆ, ಅಪಘಾತದಿಂದ ಉಂಟಾದ ಅಂಗವೈಕಲ್ಯವನ್ನು ಸೂಚಿಸುವ ಡಿಸ್ಚಾರ್ಜ್ ಸಾರಾಂಶವನ್ನು ಒಳಗೊಂಡಿರುವ ಆಸ್ಪತ್ರೆಯ ದಾಖಲೆ, Disability certificate issued by the authorised personnel of State/UT Govt. or Unique Disability Identity Card (permanent) issued by Department of Empowerment of Persons with Disabilities, M/O Social Justice & Empowerment, Govt. of India. ಈ ಮೇಲೆ ತಿಳಿಸಿದ ಸೂಕ್ತ ದಾಖಲೆಯೊಂದಿಗೆ ಕಾರ್ಮಿಕ ಅಧಿಕಾರಿಗಳ ಕಛೇರಿ, ಜೆ.ಸಿ.ಆರ್ ಬಡಾವಣೆ, ಎಸ್.ಬಿ.ಐ ಬ್ಯಾಂಕ್ ಹತ್ತಿರ, 1ನೇ ಮಹಡಿ, ಚಿತ್ರದುರ್ಗ ಇಲ್ಲಿಗೆ ಮಾರ್ಚ್ 25ರೊಳಗೆ ಅರ್ಜಿ ಸಲ್ಲಿಸಿ ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು.

## ರಹೀಂನಗರದ ಅಪ್ರಾಪ್ತ ಬಾಲಕಿ ಗರ್ಭಿಣಿ ಪ್ರಕರಣ: ಆರೋಪಿಗೆ ಶಿಕ್ಷೆ
# ಸಹಾಯಕ ತನಿಖಾಧಿಕಾರಿಗೆ ಪ್ರಶಂಸನಾ ಪತ್ರ

» **ಚಳ್ಳಕೆರೆ**

ಅಪ್ರಾಪ್ತ ಬಾಲಕಿಯನ್ನು ಬಲವಂತದಿಂದ ಕರೆದುಕೊಂಡು ಹೋಗಿ ಅಕೆಯೊಂದಿಗೆ ಲೈಗಿಂಕ ಸಂಪರ್ಕ ನಡೆಸಿ ಗರ್ಭಿಣಿಯಾಗಲು ಕಾರಣನಾದ ಆರೋಪಿಗೆ ನ್ಯಾಯಾಲಯ 10 ವರ್ಷ ಜೈಲು ಶಿಕ್ಷೆ ವಿಧಿಸಿದ್ದು, ಪ್ರಕರಣದ ತನಿಖೆಯನ್ನು ಕೈಗೊಂಡು ಆರೋಪಿಗೆ ಶಿಕ್ಷೆಯಾಗುವಂತೆ ಶ್ರಮಿಸಿದ ಚಳ್ಳಕೆರೆ ಠಾಣೆಯ ಎಎಸ್ಐ ಬಿ.ವಿ.ರವಿಕುಮಾರ್, ಮುಖ್ಯಪೇದೆ ಎಸ್.ಹೇಮಣ್ಣ ಮಹಿಳಾಪೇದೆ ಜಿ.ಕವಿತಾರವರಿಗೆ ಜಿಲ್ಲಾ ರಕ್ಷಣಾಧಿಕಾರಿ ಶ್ಲಾಘನೀಯ ಪತ್ರ ನೀಡಿ ಗೌರವಿಸಿದ್ದಾರೆ.

ನಗರದ ರಹೀಂ ನಗರದಲ್ಲಿ ವಾಸವಿದ್ದ ಅಪ್ರಾಪ್ತ ಬಾಲಕಿಯನ್ನು ಕಾರ್ತಿಕೇಯನಹಟ್ಟಿಯ ಮಲ್ಲಿ ಯಾನೆ ಮಲ್ಲಿಕಾರ್ಜುನ್(23) ಎಂಬ ಯುವಕ ಅವಳನ್ನು ಮದುವೆಯಾಗುವ ಆಮೀಷವೊಡ್ಡಿ ನಿರಂತರ ಅತ್ಯಾಚಾರ ವೆಸಗುತ್ತಿದ್ದು, ನಂತರ ಆಕೆ ಚಿತ್ರದುರ್ಗದ ಆಸ್ಪತ್ರೆಗೆ ದಾಖಲಾದಾಗ ಗರ್ಭಿಯಾಗಿದ್ದು ಕಂಡು ಬಂದಿದೆ. ಚಳ್ಳಕೆರೆ ಸಿಡಿಪಿಓ ಮಾರ್ಗದರ್ಶನದ ಮೇರೆಗೆ ನೊಂದಬಾಲಕಿ ಪೋಷಕರು 10 ಏಪ್ರಿಲ್2023ರಂದು ದೂರು ನೀಡಿದ್ದರು. ದೂರುದಾಖಲಿಸಿಕೊಂಡ ಪೋಲೀಸರು ತನಿಖೆ ಆರಂಬಿಸಿ, ಠಾಣಾ ಇನ್‌ಸ್ಪೆಕ್ಟರ್ ರಾಜಫಕ್ರುದ್ದೀನ್ ದೇಸಾಯಿ, ಪಿಎಸ್ಐ ಧರೆಪ್ಪಬಾಳಪ್ಪದೊಡ್ಡಮನಿ



ಪ್ರಕರಣದ ತನಿಖೆ ಮುಂದುವರೆಸಿ, ಸಹಾಯಕತನಿಖಾಧಿಕಾರಿಯಾಗಿಸಮರ್ಪಕಸಾಕ್ಷಾಧಾರಗಳನ್ನು ದಾಖಲಿಸಿ ಆರೋಪಿಗೆ ಜೈಲುಶಿಕ್ಷೆಯಾಗುವಂತೆ ದಕ್ಷತೆ, ಪ್ರಾಮಾಣಿಕತೆಯಿಂದ ಕಾರ್ಯ ನಿರ್ವಹಿಸಿದ ಎಎಸ್ಐ ಬಿ.ವಿ.ರವಿಕುಮಾರ್ ಹಾಗೂ ಸಿಬ್ಬಂದಿಗೆ ಜಿಲ್ಲಾ ರಕ್ಷಣಾಧಿಕಾರಿ ಧರ್ಮೇಂದ್ರಕುಮಾರ್ ಮೀನಾ ಶುಕ್ರವಾರ ಶ್ಲಾಘನೀಯ ಪತ್ರ ನೀಡಿ ಪ್ರಶಂಸೆ ವ್ಯಕ್ತಪಡಿಸಿದ್ದಾರೆ.ಎಎಸ್ಐರವಿಕುಮಾರ್‌ಹಲವಾರುಪ್ರಕರಣಗಳಲ್ಲಿಆರೋಪಿಗಳಿಗೆಶಿಕ್ಷೆಕೊಡಿಸುವವಿಚಾರದಲ್ಲಿ ಹೆಚ್ಚು ದಕ್ಷತೆಯಿಂದ ಕಾರ್ಯನಿರ್ವಹಿಸುತ್ತಿರುವುದು ಮೆಚ್ಚುಗೆ ವ್ಯಕ್ತವಾಗಿದೆ.

## ಜುಂಜರಗುಂಟೆ ಗೇಟ್ ಬಸ್ ತಂಗುದಾಣ ದುರಸ್ತಿಗೆ ಒತ್ತಾಯ



» **ಪರಶುರಾಂಪುರ**

ಸಮೀಪದ ಜುಂಜರಗುಂಟೆ ಬಸ್ ತಂಗುದಾಣ ಸಂಪೂರ್ಣ ಶಿಥಿಲಗೊಂಡಿದ್ದು, ದುರಸ್ತಿಗೆ ಕ್ರಮಕೈಗೊಳ್ಳುವಂತೆ ಸಾರ್ವಜನಿಕರು ಒತ್ತಾಯಿಸಿದ್ದಾರೆ.ಈ ತಂಗುದಾಣವು ಚಳ್ಳಕೆರೆ–ಪರಶುರಾಂಪುರ ಮುಖ್ಯರಸ್ತೆಯಲಿದ್ದು, ಇಲ್ಲಿಂದ ಗೇಟ್ ಮಾರ್ಗವಾಗಿ ಜುಂಜರಗುಂಟೆ, ಚಟ್ಟೆಕಂಬ,ಮತ್ಸಮುದ್ರ,ಹರವಿಗೊಂಡನಹಳ್ಳಿ,ಕಾಲುವೆ ಹಳ್ಳಿ ಸೇರಿದಂತೆ ಜಾಜೂರು ಮುಖ್ಯ ರಸ್ತೆಗೆ ಸೇರುವ ಸಂಪರ್ಕ ಕಲ್ಪಿಸುವುದರ ಜತೆ ಹತ್ತಾರು ಗ್ರಾಮಗಳ ಪ್ರಯಾಣಿಕರು ಪ್ರಯಾಣಿಸುತ್ತಾರೆ. ಈ ನಿಲ್ದಾಣದ ಮೇಲ್ಭಾಗದ ಚಾವಣಿ ಬಿರುಕು ಬಿಟ್ಟು ಬಿದ್ದು ಹೋಗಿ ಈಗ ಯಾವ ಸಮಯದಲ್ಲಿ ಬೇಕಾದರು ಗೋಡೆಗಳು ಬೀಳುವ ದುಃಸ್ಥಿತಿಯಲ್ಲಿದೆ. ಆದ್ದರಿಂದ ಜನರು ತಂಗುದಾಣದಲ್ಲಿ ನಿಲ್ಲದೇ ಬಿಸಿಲಿಗೆ ಬಸ್‌ಗಾಗಿ ಕಾಯುತ್ತಿದ್ದಾರೆ. ಕೂಡಲೇ ಬಸ್ ತಂಗುದಾಣ ದುರಸ್ತಿಗೊಳಿಸುವಂತೆ ಪ್ರಯಾಣಿಕರು,ಸಾವ9ಜನಿಕರ ಜತೆ ಇತರರು ಒತ್ತಾಯಿಸಿದ್ದಾರೆ. ಗ್ರಾಮೀಣ ಭಾಗಗಳಿಗೆ ಬಸ್ ಸಂಚಾರವಿದ್ದರೂ ಅವುಗಳಿಗಾಗಿ ಕಾಯುತ್ತ ನಿಲ್ಲಲು ಸರಿಯಾದ ವ್ಯವಸ್ಥೆಯಿಲ್ಲ. ಹಲವು ಗ್ರಾಮಗಳಲ್ಲಿ ಬಸ್ ತಂಗುದಾಣಗಳು ಶಿಥಿಲಾವಸ್ಥೆ ತಲುಪಿವೆ. ಪ್ರಯಾಣಿಕರು ರಸ್ತೆ ಬದಿಯಲ್ಲಿ ಬಿಸಿಲು, ಮಳೆಯಲ್ಲೇ ಬಸ್‌ಗಳಿಗಾಗಿ ಕಾಯಬೇಕಿದೆ.

**ಪ್ರಮುಖ ಸುದ್ದಿ**

## ದಾವಣಗೆರೆ ವಿವಿ ಡೀನ್ ಡಾ.ಕೆ.ವೆಂಕಟೇಶ್ ಅಭಿಮತ
# ಬಿ.ಇಡಿ ಆತ್ಮವಿಶ್ವಾಸ ಮೂಡಿಸುವ ಕೋರ್ಸ್

» **ಹೊಸದುರ್ಗ**

ಜಗತ್ತಿನಲ್ಲಿ ಶಿಕ್ಷಕ ವೃತ್ತಿ ಅತ್ಯಂತ ಪವಿತ್ರವಾದದ್ದು. ಶಿಕ್ಷಣದ ಮೂಲಕ ವಿದ್ಯಾರ್ಥಿಗಳ ಭವಿಷ್ಯವನ್ನು ಬೆಳಗುವ ಶ್ರೇಷ್ಠ ವೃತ್ತಿಯಾಗಿದೆ. ಬಿ.ಇಡಿ ಎನ್ನುವಂತಹ 2 ವರ್ಷಗಳ ತರಬೇತಿಯೇ ಅತ್ಯದ್ಭುತವಾದುದ್ದು. ಎಲ್ಲಿ ಸಲ್ಲುವರು, ಇಲ್ಲಿ ಸಲುವರಯ್ಯ ಎನ್ನುವ ಮಾತಿತ್ತು. ಆದರೆ, ಇದೀಗ, ಇಲ್ಲಿ ಸಲ್ಲುವರು ಎಲ್ಲಿಯೂ ಸಲ್ಲುವರಯ್ಯ ಎಂದು ಹೇಳಲಾಗುತ್ತಿದೆ. ಇದು ಪ್ರಶಿಕ್ಷಣಾರ್ಥಿಗಳಲ್ಲಿ ಆತ್ಮವಿಶ್ವಾಸವನ್ನು ಮೂಡಿಸುತ್ತದೆ ಎಂದು ಅಭಿಮತ ವ್ಯಕ್ತಪಡಿಸಿದರು.

ಪಟ್ಟಣದ ಇಂದಿರಾಗಾಂಧಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ಶುಕ್ರವಾರ ಆಯೋಜಿಸಿದ್ದ ವಿದ್ಯಾರ್ಥಿ ಸಂಘದ ಉದ್ಘಾಟನೆ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭವನ್ನು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಬಿ.ಇಡಿ ಕೋರ್ಸ್ ಆದಂತಹ ವಿದ್ಯಾರ್ಥಿಗಳನ್ನು ನಾವು ಎಲ್ಲಾ



ಕ್ಷೇತ್ರಗಳಲ್ಲಿಯೂ ನೋಡಬಹುದು. ಸೂಕ್ಷ್ಮ ಅಣುಬೋಧನೆ, ಸಿಟಿಸಿ, ಪ್ರಾಕ್ಟೀಸ್ ಟೀಚಿಂಗ್ ಮತ್ತು ಇಂಟರ್ಶಿಪ್ ಇವುಗಳು ಈ ಕೋರ್ಸಿನ 4 ಆಧಾರ ಸ್ತಂಭಗಳಾಗಿವೆ. ಇಲ್ಲಿ ನಾನು ಎನ್ನುವ ಅಹಂ ಬಿಟ್ಟು, ಉಪನ್ಯಾಸಕರು ಹೇಳಿಕೊಡುವ ಎಲ್ಲಾ ಕೆಲಸವನ್ನು ಅಚ್ಚುಕಟ್ಟಾಗಿ ನಿರ್ವಹಿಸಿದಾಗ ಮಾತ್ರ,ಉತ್ತಮಶಿಕ್ಷಕರಾಗಿಹೊರಹೊಮ್ಮಲು ಸಾಧ್ಯವಾಗುತ್ತದೆ. ಹಿಂದೆ ಉದ್ಯೋಗಂ ಪುರುಷ ಲಕ್ಷಣಂ ಎನ್ನುತ್ತಿದ್ದರು. ಈಗ ಸ್ತ್ರೀ–ಪುರುಷಂ ಉದ್ಯೋಗ ಲಕ್ಷಣಂ ಎನ್ನುತ್ತಿದ್ದು, ಮುಂದಿನ ದಿನಗಳಲ್ಲಿ ಉದ್ಯೋಗಂ ಸ್ತ್ರೀ ಲಕ್ಷಣಂ ಎನ್ನುವ ಕಾಲ ಸಮೀಪದಲ್ಲಿದೆ. ಇತ್ತೀಚಿನ ದಿನಗಳಲ್ಲಿ ಯುವಕರಿಗಿಂತ ಯುವತಿಯರೇ ಹೆಚ್ಚಾಗಿ ಬಿ.ಇಡಿ ಕೋರ್ಸ್ ಪಡೆಯುತ್ತಿರುವುದು ಸಂತಸ ತಂದಿದೆ ಎಂದರು.

ನಿಜಲಿಂಗಪ್ಪ ಶಿಕ್ಷಣ ಸಂಸ್ಥೆಯ ಖಜಾಂಚಿ ಮಲ್ಲಿಕಾರ್ಜುನಪ್ಪ ಮಾತನಾಡಿ, ಸರ್ಕಾರ ಶಿಕ್ಷಣವನ್ನು ಖಾಸಗೀಕರಣ ಗೊಳಿಸುತ್ತಿರುವಂತಹ ಸಂದರ್ಭದಲ್ಲಿ ಹೆಚ್ಚು ವಿದ್ಯಾರ್ಥಿಗಳು ಬಿ.ಇಡಿ ಕೋರ್ಸ್ ಪಡೆಯಲು ಮುಂದಾಗುತ್ತಿರುವುದು ಸಂತಸದ ವಿಷಯ. ಅಧ್ಯಯನ ಮತ್ತು ಬೋಧನೆ ಒಂದು ನಾಣ್ಯದ ಎರಡು ಮುಖಗಳಿದ್ದಂತೆ. ಒಂದನ್ನು ಬಿಟ್ಟು ಇನ್ನೊಂದು ಇರಲಾರದು. ಹಾಗಾಗಿ, ಶಿಕ್ಷಕರಾಗ ಬೇಕಾದವರು ನಿರಂತರ ಅಧ್ಯಯನ ಶೀಲರಾಗಿರಬೇಕು. ಹೆಚ್ಚು ಹೆಚ್ಚು ಓದಿದಂತೆ ಒಳ್ಳೆಯ ಜ್ಞಾನವಂತರಾಗಲು ಸಾಧ್ಯವಾಗುತ್ತದೆ.ಶಿಕ್ಷಕರಾಗಿನೀವುಮಾಡುವ ಸೇವೆ ನಿಮ್ಮನ್ನು ಸದಾ ಗುರುತಿಸುವಂತೆ ಮಾಡುತ್ತದೆ. ಶಿಕ್ಷಕರಾಗಬೇಕಾದವರಲ್ಲಿ ಸಂಸ್ಕಾರ, ಶಿಸ್ತು, ತಾಳ್ಮೆ, ಬದ್ಧತೆ, ಸ್ವೀಕಾರ ಮನೋಭಾವ ಮತ್ತು ಅಧ್ಯಯನಶೀಲತೆ ಬಹಳ ಮುಖ್ಯವಾಗಿದ್ದು, ಇವು ನಿಮ್ಮಲ್ಲಿ ಬೆಳೆಯಬೇಕೆಂದು ಪ್ರಶಿಕ್ಷಣಾರ್ಥಿಗಳಿಗೆ ಸಲಹೆ ನೀಡಿದರು.


ಪುಟ 2


ಒಳ್ಳೆಯ ಸಂಸ್ಕಾರ, ಉತ್ತಮ ರೀತಿಯಲ್ಲಿ ಜೀವನ ನಡೆಸಲು ಸಹಕಾರಿ. ಜಗತ್ತಿನಲ್ಲಿ ಅತ್ಯಂತ ಶ್ರೇಷ್ಠವಾದ ವ್ಯಕ್ತಿಗಳಲ್ಲಿ ಮೊದಲನೆಯ ಸ್ಥಾನದಲ್ಲಿ ಶಿಕ್ಷಕ ನಿಲ್ಲುತ್ತಾನೆ. ಈ ವೃತ್ತಿಗೆ ಅಂತಹ ಸ್ಥಾನವಿದೆ. ಎಂತಹ ವಿದ್ಯಾರ್ಥಿಯನ್ನು ಆದರೂ, ತನ್ನ ಪರಿಣಾಮಕಾರಿ ಬೋಧನೆಯ ಮೂಲಕ ಸರಿದಾರಿಗೆ ತರುವ ಶಕ್ತಿ ಶಿಕ್ಷಕನಲ್ಲಿದೆ. ಶಿಕ್ಷಣ ಗಳಿಕೆ ಮಾಡಿದಂತಹ ವ್ಯಕ್ತಿ ಉದ್ಯೋಗದ ಜೊತೆಗೆ ಕುಟುಂಬ ಮತ್ತು ಸುತ್ತಲಿನ ಪರಿಸರ ಜಾಗೃತವಾಗಿರುವಂತೆ ನೋಡಿಕೊಳ್ಳುತ್ತಾನೆ. ಬಿ.ಇಡಿ ಕೋರ್ಸ್ ಪ್ರಶಿಕ್ಷಣಾರ್ಥಿಗಳನ್ನು ಉತ್ತಮ ಶಿಕ್ಷಕರನ್ನಾಗಿ ರೂಪಿಸುತ್ತದೆ. ಇಲ್ಲಿ ಕಲಿತಷ್ಟು ಆಳವಾದ ಜ್ಞಾನವಿದ್ದು, ಕಲಿಯುವ ಮನಸ್ಸು ಬೇಕಷ್ಟೇ.

» **ಡಾ.ಕೆ.ಎಂ.ವೀರೇಶ್ ಗೌರವ ಡಾಕ್ಟರೇಟ್ ಪುರಸ್ಕೃತರು ಮತ್ತು ಅಧ್ಯಕ್ಷರು, ಬಾಪೂಜಿ ವಿದ್ಯಾಸಂಸ್ಥೆ, ಚಿತ್ರದುರ್ಗ**

## ಫಾಸ್ಟ್ ನ್ಯೂಸ್

### ಮಹೇಶಪ್ಪ ಕಾಣೆ

» ದಾವಣಗೆರೆ

ಹರಿಹರ ತಾಲ್ಲೂಕು ದಿಟೂರು ಗ್ರಾಮದ ವಾಸಿಯಾದ ಮಹೇಶಪ್ಪ ತಂದೆ ಲೇಟ್ ಹಳ್ಳಿಳ್ಳಿ ಭೀಮಪ್ಪ 54 ವರ್ಷ 2015 ರ ಅಕ್ಟೋಬರ್ 15 ರಿಂದ ಮನೆಯಿಂದ ಹೋದವರು ಇದೂವರೆಗೂ ಮನೆಗೆ ವಾಪಾಸ್ ಬಂದಿರುವುದಿಲ್ಲ.ಚಹರೆ ವಿವರ; ತೆಳುವಾದ ಮೈಕಟ್ಟು, 5 ಅಡಿ ಎತ್ತರ, ತುಂಬು ತೋಳಿನ ಬಿಳಿ ಬಣ್ಣದ ಶರ್ಟ್, ಬಿಳಿ ಬಣ್ಣದ ಲಿಂಗಿ ಹಾಗೂ ಸಿಮೆಂಟ್ ಕಲರ್ ಚಡ್ಡಿ ಧರಿಸಿ ಹೋಗಿತ್ತಾರೆ. ಕನ್ನಡ ಬಾಷೆ ಮಾತನಾಡುತ್ತಾರೆ ಇವರ ಬಗ್ಗೆ ಸುಳಿವು ಸಿಕ್ಕಲ್ಲಿ ಕೂಡಲೇ ದೂ.ಸಂ: 08192-272016, 08192-262550, 08192-253400,237830 ತಿಳಿಸಬೇಕೆಂದು ಎಂದು ಹರಿಹರದ ಪೊಲೀಸ್ ಠಾಣೆಯ ಉಪನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬಿ.ಎಸ್.ಶೆಟ್ಟಿ ಕಾಣೆ

» ದಾವಣಗೆರೆ

ಹರಿಹರ ತಾಲ್ಲೂಕು ಬೆಳ್ಳೂಡಿ ಗ್ರಾಮದ ವಾಸಿಯಾದ ಶೆಟ್ಟಿ ಬಿ.ಎಸ್. 61 ವರ್ಷ, 1986 ರ ಅಕ್ಟೋಬರ್ 15 ರಂದು ತಂದೆ ಬೈದಿದ್ದಕ್ಕೆ ಬೇಸರ ಮಾಡಿಕೊಂಡು ಮನೆಯಿಂದ ಹೋದವರು ಇದೂವರೆಗೂ ಮನೆಗೆ ವಾಪಾಸ್ ಬಂದಿರುವುದಿಲ್ಲ. ಚಹರೆ ವಿವರ; ಸಾಧಾರಣ ಮೈಕಟ್ಟು, 168 ಚ.ಸೆ. ಮೀಟರ್ ಎತ್ತರ, ತುಂಬು ತೋಳಿನ ಕಂದು ಬಣ್ಣದ ಶರ್ಟ್, ನೀಲಿ ಬಣ್ಣದ ಲಿಂಗಿ ಧರಿಸಿ ಹೋಗಿತ್ತಾರೆ. ಕನ್ನಡ ಬಾಷೆ ಮಾತನಾಡುತ್ತಾರೆ ಇವರ ಬಗ್ಗೆ ಸುಳಿವು ಸಿಕ್ಕಲ್ಲಿ ಕೂಡಲೇ ದೂ.ಸಂ: 08192-272016, 08192-262550, 08192-253400,237830 ತಿಳಿಸಬೇಕೆಂದು ಎಂದು ಹರಿಹರದ ಪೊಲೀಸ್ ಠಾಣೆಯ ಉಪನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### 16 ರಂದು ರಾಷ್ಟ್ರೀಯ ಲೋಕ ಅದಾಲತ್

» ದಾವಣಗೆರೆ

ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರಗಳ ಆದೇಶದ ಮೇರೆಗೆ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಮಾರ್ಚ್ 16 ರಂದು ರಾಷ್ಟ್ರೀಯ ಲೋಕ ಅದಾಲತ್ ಆಯೋಜಿಸಲಾಗಿದೆ.ಲೋಕ ಅದಾಲತ್‌ನಲ್ಲಿ ನ್ಯಾಯಾಲಯದಲ್ಲಿ ಬಾಕಿ ಇರುವ, ರಾಜಿ ಆಗಬಹುದಾದ ಸಿವಿಲ್ ವ್ಯಾಜ್ಯ, ಮೋಟಾರ್ ವಾಹನ ಅಪಘಾತ ಪರಿಹಾರದ ಪ್ರಕರಣಗಳು, ಭೂ ಸ್ವಾಧೀನ ಪ್ರಕರಣಗಳು, ವಿದ್ಯುತ್ ಮಂಡಳಿ ಮುಂತಾದ ಸ್ಥಳೀಯ ಸಂಸ್ಥೆಗಳ ಪರ ಮತ್ತು ವಿರುದ್ಧ ದಾಖಲಾದ ಪ್ರಕರಣಗಳು, ಬ್ಯಾಂಕ್, ಸಹಕಾರಿ ಸಂಘ, ಖಾಸಗಿ ವ್ಯಕ್ತಿಗಳ ನಡುವಿನ ಚೆಕ್ ಅಮಾನ್ಯ, ಹಣ ವಸುಲಾತಿ ಪ್ರಕರಣಗಳಿಗೆ ಸಂಬಂಧಿಸಿದ ವ್ಯಾಜ್ಯಗಳು, ವೈವಾಹಿಕ ಪ್ರಕರಣಗಳು ವಿವಾಹ ವಿಚ್ಛೇದನ ಹೊರತುಪಡಿಸಿ, ಜಿಲ್ಲಾ ಗ್ರಾಹಕರ ವೇದಿಕೆಯಲ್ಲಿನ ಪ್ರಕರಣಗಳು, ಕಾರ್ಮಿಕ ನಷ್ಟ ಪರಿಹಾರ ಪ್ರಕರಣಗಳು, ಕಾನೂನಿನಲ್ಲಿ ರಾಜಿ ಆಗಬಹುದಾದ ಎಲ್ಲಾ ತರಹದ ಕ್ರಿಮಿನಲ್ ಪ್ರಕರಣಗಳನ್ನು ಹಾಗೂ ವ್ಯಾಜ್ಯಪೂರ್ವ ಪ್ರಕರಣಗಳನ್ನು ಬಗೆಹರಿಸಿಕೊಳ್ಳಲು ಅವಕಾಶ ಕಲ್ಪಿಸಲಾಗುವುದು ಹಾಗೂ ಸಿವಿಲ್ ವ್ಯಾಜ್ಯಗಳಲ್ಲಿ ಪಕ್ಷಗಾರರು ಲೋಕ್-ಅದಾಲತ್ ನಲ್ಲಿ ರಾಜಿಯಾದರೆ ಪಕ್ಷಗಾರರು ಸರ್ಕಾರಕ್ಕೆ ಪಾವತಿಸಿರುವ ನ್ಯಾಯಾಲಯದ ಶುಲ್ಕವನ್ನು ವಾಪಸ್ಸು ಕೊಡಲು ಅವಕಾಶವಿದೆ.ಲೋಕ್ ಆದಾಲತ್‌ನಲ್ಲಿ ಉಭಯ ಪಕ್ಷಗಾರರು ಪರಸ್ಪರ ಒಪ್ಪಿದಲ್ಲಿ ಮಾತ್ರ ರಾಜಿ ಮಾಡಿಕೊಳ್ಳಬಹುದು. ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯನಿರ್ವಾಹಕ ಅಧ್ಯಕ್ಷ ನ್ಯಾಯಮೂರ್ತಿಗಳ ಆಶಯದಂತೆ ಲೋಕ್ -ಆದಾಲತ್ ಮುಖಾಂತರ ಪ್ರಕರಣಗಳನ್ನು ಇತ್ಯಾರ್ಥಪಡಿಸಲು ಲೋಕ್-ಆದಾಲತ್ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವಂತೆ ಸಾರ್ವಜನಿಕರು ವಿಶೇಷವಾಗಿ ಕಕ್ಷಿಗಾರರು ಹೆಚ್ಚಿನ ಸಂಖ್ಯೆಯಲ್ಲಿ ಲೋಕ ಅದಾಲತ್‌ನ ಸದುಪಯೋಗ ಪಡಿಸಿಕೊಳ್ಳಬೇಕೆಂದು ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಸದಸ್ಯ ಕಾರ್ಯದರ್ಶಿ ಮಹಾವೀರ ಮ. ಕರೆಣ್ಣವರ ತಿಳಿಸಿದ್ದಾರೆ.

### ನೀರು ಸರಬರಾಜು ಶುಲ್ಕ ಪಾವತಿಗೆ ಸೂಚನೆ

» ದಾವಣಗೆರೆ

ಹರಿಹರ ನಗರಸಭೆ ವ್ಯಾಪ್ತಿಯಲ್ಲಿ 24/7 ನಿರಂತರ ಕುಡಿಯುವ ನೀರು ಪೂರೈಸಲಾಗುತ್ತಿದೆ. ಗ್ರಾಹಕರಿಂದ ಬಳಕೆಗೆ ತಕ್ಕಂತೆ ನೀರಿನ ಶುಲ್ಕ ಸಂಗ್ರಹಣೆ ಕಾರ್ಯವು ಪ್ರಗತಿಯಲ್ಲಿರುತ್ತದೆ. ನೀರಿನ ಶುಲ್ಕವನ್ನು ಬಳಕೆಗೆ ತಕ್ಕಂತೆ ನಗರಸಭೆ ಆವರಣದಲ್ಲಿರುವ ಹಣ ಪಾವತಿ ಕೇಂದ್ರದಲ್ಲಿಯೇ ಪಾವತಿಸಿ ರಶೀದಿ ಪಡೆಯಬೇಕು. ಅಥವಾ hariharawater.co.in ಆನ್‌ಲೈನ್ ಮೂಲಕ ಪಾವತಿಸಬಹುದು, ಬಿಲ್ ವಿತರಕರು, ಮೀಟರ್ ರೀಡರ್ ಕೈಯಲ್ಲಿ ಹಣ ಕೊಡಬಾರದು. ಯೋಜನಾ ಕಾರ್ಯಾಚರಣೆ ಮತ್ತು ನಿರ್ವಹಣೆ ಅವಧಿಯನ್ನು 8 ವರ್ಷಗಳ ಅವಧಿಯವರೆಗೆ ಗುತ್ತಿಗೆದಾರರಿಗೆ ನೀಡಲಾಗಿದ್ದು, ನೀರಿನ ಶುಲ್ಕ ಪಾವತಿಸಿ ನೀರು ಸರಬರಾಜು ಯೋಜನೆ ಕಾಮಗಾರಿಗಳ ಅಭಿವೃದ್ಧಿಗೆ ಸಹಕರಿಸಬೇಕು. ತುಂಗಾಭದ್ರ ನದಿ ಪಾತ್ರದಲ್ಲಿ ನೀರಿನ ಹರಿವು ಕಡಿಮಡಯಾಗಿದ್ದು, ನೀರು ಬಳಕೆದಾರರು ನೀರನ್ನು ಸಂಗ್ರಹಿಸಿಟ್ಟುಕೊಳ್ಳಬೇಕು. ಹಾಗೂ ನೀರನ್ನು ಮಿತವಾಗಿ ಬಳಸಬೇಕು. ಕುಡಿಯುವ ನೀರು ಸರಬರಾಜು ಪೈಪಲೈನ್‌ಗೆ ಅನಧಿಕೃತ, ಆಕ್ರಮ ನಳ ಸಂಪರ್ಕಗಳು ಕಂಡು ಬಂದಲ್ಲಿ ದಂಡ ವಿಧಿಸಲಾಗುವುದು.

### ಸುಗಮ ಪರೀಕ್ಷೆಗಾಗಿ ಕೇಂದ್ರಗಳಲ್ಲಿ ಅಗತ್ಯ ಮುಂಜಾಗ್ರತಾ ಕ್ರಮಕ್ಕೆ ಸೂಚನೆ

# ಮಾರ್ಚ್ 25 ರಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆ

» ದಾವಣಗೆರೆ

ಪ್ರಸಕ್ತ ಸಾಲಿನ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯು ಮಾರ್ಚ್ 25 ರಿಂದ ಆರಂಭವಾಗುತ್ತಿದ್ದು ಜಿಲ್ಲೆಯಲ್ಲಿ 82 ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದೆ. ಕೇಂದ್ರಗಳಲ್ಲಿ ಅಗತ್ಯ ಮೂಲಭೂತ ಸೌಕರ್ಯ ಕಲ್ಪಿಸುವುದರೊಂದಿಗೆ ಪರೀಕ್ಷೆಯನ್ನು ಸುಗಮವಾಗಿ ನಡೆಸಿಕೊಡಲು ಎಲ್ಲಾ ಸಿದ್ದತೆ ಕೈಗೊಳ್ಳಲು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದರು.

ಅವರು ಶುಕ್ರವಾರ ನಗರದ ಗುರುಭವನದಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷಾ ಪೂರ್ವ ಸಿದ್ದತಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಜಿಲ್ಲೆಯಲ್ಲಿ 166 ಸರ್ಕಾರಿ, 172 ಅನುದಾನಿತ, 134 ಅನುದಾನ ರಹಿತ ಸೇರಿ 472 ಪ್ರೌಢಶಾಲೆಗಳಿಂದ 11131 ಗಂಡು, 11130 ಹೆಣ್ಣು ಸೇರಿ 22261 ವಿದ್ಯಾರ್ಥಿಗಳು ಎಸ್.ಎಸ್.ಎಲ್.ಸಿ. ಪರೀಕ್ಷೆ ಬರೆಯಲಿದ್ದಾರೆ. ಜಿಲ್ಲೆಯಲ್ಲಿ 41 ಕೇಂದ್ರಗಳು ಸರ್ಕಾರಿ ಪ್ರೌಢಶಾಲೆ, 35 ಅನುದಾನಿತ, 6 ಅನುದಾನ ರಹಿತ ಪ್ರೌಢಶಾಲೆಗಳು ಸೇರಿ 82 ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ.

ತಾಲ್ಲೂಕುವಾರು ವಿವರದನ್ವಯ ಚನ್ನಗಿರಿ 16, ದಾವಣಗೆರೆ ಉತ್ತರ 14,



ದಾವಣಗೆರೆ ದಕ್ಷಿಣ 17, ಹರಿಹರ 12, ಹೊನ್ನಾಳಿ 11 ಹಾಗೂ ಜಗಳೂರು ತಾಲ್ಲೂಕಿನ 12 ಕೇಂದ್ರಗಳಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆ ನಡೆಯಲಿದೆ. ಒಟ್ಟು ಪರೀಕ್ಷಾ ಕೇಂದ್ರಗಳಲ್ಲಿ 40 ಗ್ರಾಮೀಣ, 42 ನಗರ, ಪಟ್ಟಣದ ಕೇಂದ್ರಗಳಾಗಿವೆ. ಪರೀಕ್ಷೆ ನಡೆಯುತ್ತಿರುವ ಎಲ್ಲಾ ಕೇಂದ್ರಗಳಿಗೆ ಸಿಸಿಟಿವಿ ಅಳವಡಿಸಲಾಗುತ್ತಿದ್ದು ಇದರಲ್ಲಿ 10 ಕೇಂದ್ರಗಳನ್ನು ಸೂಕ್ಷ್ಮ, ಅತೀಸೂಕ್ಷ್ಮ ಎಂದು ಗುರುತಿಸಿದ್ದು ಇಲ್ಲಿ ವಿಶೇಷ ಭದ್ರತೆ ಮತ್ತು ನಿಗಾವಹಿಸಲು ಸೂಚನೆ ನೀಡಿದರು.ಸಕಾಲದಲ್ಲಿ ಪ್ರಶ್ನೆಪತ್ರಿಕೆ; ಪ್ರಶ್ನೆ ಪತ್ರಿಕೆಗಳನ್ನು ಖಜಾನೆಯಿಂದ ಸಕಾಲದಲ್ಲಿ ಪರೀಕ್ಷಾ ಕೇಂದ್ರಗಳಿಗೆ ಪ್ರಶ್ನೆಪತ್ರಿಕೆಗಳನ್ನು ತಲುಪಿಸಲು ಒಟ್ಟು 30 ಮಾರ್ಗಗಳನ್ನು ಗುರುತಿಸಲಾಗಿದೆ.ಮಾರ್ಗದ ಅಧಿಕಾರಿಗಳು ಯಾವುದೇ ವಿಳಂಬಕ್ಕೆ ಅವಕಾಶ ನೀಡದೆ ಸಕಾಲದಲ್ಲಿ ತಲುಪಿಸಬೇಕೆಂದು ಸೂಚನೆ ನೀಡಿದರು. ಪರೀಕ್ಷೆಯಲ್ಲಿ ಯಾವುದೇ ಗೊಂದಲಕ್ಕೆ ಅವಕಾಶ ಮಾಡದೆ ವಿದ್ಯಾರ್ಥಿಗಳು ಯಾವುದೇ ಭಯದ ವಾತಾವರಣದಲ್ಲಿ ಪರೀಕ್ಷೆ ಬರೆಯದಂತೆ ಪ್ರಶಾಂತ ವಾತಾವರಣ ಕಲ್ಪಿಸಲು ಪರೀಕ್ಷಾ ಕೇಂದ್ರದ ಅಧೀಕ್ಷಕರು ಕ್ರಮ ಕೈಗೊಳ್ಳಬೇಕು. ವಿದ್ಯಾರ್ಥಿಗಳಿಗೆ ಪರೀಕ್ಷಾ ಮಾರ್ಗಸೂಚಿಗಳ ಬಗ್ಗೆ ಮಾಹಿತಿ ನೀಡಿ ಇಲ್ಲಿ ಯಾವುದೇ ಪರೀಕ್ಷಾ ಅವ್ಯವಹಾರ ನಡೆಯದಂತೆ ನೋಡಿಕೊಂಡು ಸುಗಮವಾಗಿ ಪರೀಕ್ಷೆ ನಡೆಸಬೇಕೆಂದು ಸೂಚನೆ ನೀಡಿ ಕೇಂದ್ರದ ಸುತ್ತಮುತ್ತ 144 ಸೆಕ್ಷನ್ ಜಾರಿಗೊಳಿಸುವ ಮೂಲಕ ನಿಷೇಧಾಜ್ಞೆ ಜಾರಿಗೊಳಿಸಲಾಗುತ್ತದೆ ಎಂದರು.

ಮಾರ್ಚ್ 25 ರಂದು ಬೆಳಗ್ಗೆ 10.15 ರಿಂದ ಮ.1.30 ರ ವರೆಗೆ ಪ್ರಥಮ ಭಾಷೆ ಪರೀಕ್ಷೆ ಕನ್ನಡ, ತೆಲುಗು, ಹಿಂದಿ, ಮರಾಠಿ, ತಮಿಳು, ಉರ್ದು, ಇಂಗ್ಲೀಷ್, ಇಂಗ್ಲೀಷ್ ಎನ್.ಸಿ.ಇ.ಆರ್.ಟಿ, ಸಂಸ್ಕೃತ, ಮಾ.27 ರಂದು ಸಮಾಜ ವಿಜ್ಞಾನ, ಮಾ.30 ರಂದು ವಿಜ್ಞಾನ, ರಾಜ್ಯಶಾಸ್ತ್ರ, ಮಧ್ಯಾಹ್ನ 2 ರಿಂದ ಹಿಂದೂಸ್ತಾನಿ ಸಂಗೀತ, ಕರ್ನಾಟಕ ಸಂಗೀತ, ಏ.2 ರಂದು ಗಣಿತ, ಸಮಾಜಶಾಸ್ತ್ರ, ಎಲಿಮೆಂಟ್ಸ್ ಆಫ್ ಎಲೆಕ್ಟ್ರಿಕಲ್ ಇಂಜಿನಿಯರಿಂಗ್,ಮೆಕಾನಿಕಲ್ ಮತ್ತು ಎಲೆಕ್ಟ್ರಿಕಲ್ ಇಂಜಿನಿಯರಿಂಗ್, ಏ.3 ರಂದು ಎಲಿಮೆಂಟ್ಸ್ ಆಫ್ ಎಲೆಕ್ಟ್ರಿಕಲ್ ಇಂಜಿನಿಯರಿಂಗ್, ಮೆಕಾನಿಕಲ್ ಮತ್ತು ಎಲೆಕ್ಟ್ರಿಕಲ್ ಇಂಜಿನಿಯರಿಂಗ್, ಏ.4 ರಂದು ತೃತೀಯ ಭಾಷೆ ಹಿಂದಿ, ಕನ್ನಡ, ಇಂಗ್ಲೀಷ್, ಉರ್ದು, ತುಳು, ಅರೇಬಿಕ್, ಸಂಸ್ಕೃತ, ಮತ್ತು ಏಪ್ರಿಲ್ 6 ರಂದು ದ್ವಿತೀಯ ಭಾಷೆ ಇಂಗ್ಲೀಷ್, ಕನ್ನಡ ವಿಷಯಗಳ ಪರೀಕ್ಷೆ ನಡೆಯಲಿದೆ.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್, ಹೆಚ್ಚುವರಿ ರಕ್ಷಣಾಧಿಕಾರಿ ವಿಜಯಕುಮಾರ್ ಎಂ.ಸಂತೋಷ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಉಪನಿರ್ದೇಶಕರಾದ ಕೊಟ್ರೇಶ್, ಡಯಟ್ ಪ್ರಾಂಶುಪಾಲರಾದ ಗೀತಾ ಹಾಗೂ ಎಲ್ಲಾ ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಕೇಂದ್ರ ಅಧೀಕ್ಷಕರು ಉಪಸ್ಥಿತರಿದ್ದರು.

# ರಾಹುಲ್ ಗಾಂಧಿಯಿಂದ ಭಾರತಕ್ಕೆ ಮತ್ತಷ್ಟು ಶಕ್ತಿ

» ಚಿತ್ರದುರ್ಗ

ಇಂದು ಧರ್ಮಗಳಲ್ಲಿ ವಿಷದ ಬೀಜ ಬಿತ್ತುವ ಕೆಲಸ ನಡೆಯುತ್ತಿದೆ. ಇಂತಹ ಸಮಯದಲ್ಲಿ ರಾಹುಲ್ ಗಾಂಧಿ ಅವರು ಭಾರತ್ ಜೋಡೋ ಯಾತ್ರೆ ಮಾಡುವ ಮೂಲಕ ಭಾರತಕ್ಕೆ ಮತ್ತಷ್ಟು ಶಕ್ತಿಯನ್ನು ಅವರ ಪಾದಯಾತ್ರೆ ನೀಡಿತು ಎಂದು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂಕೆ ತಾಜ್ ಪೀರ್ ಹೇಳಿದರು.

ಚಿತ್ರದುರ್ಗದ ಪತ್ರಿಕಾ ಭವನದಲ್ಲಿ ರಾಹುಲ್ ಗಾಂಧಿ ವಿಚಾರ ಮಂಚ್‌ವತಿಯಿಂದ ನಡೆದ ಅಭಿನಂದನೆಯನ್ನು ಸ್ವೀಕರಿಸಿ ಮಾತನಾಡಿದ ಅವರು,ರಾಹುಲ್‌ಗಾಂಧಿಅವರಆಲೋಚನೆಗಳು ಬಹಳಷ್ಟು ಬದಲಾಗಿವೆ. ಅವರು ಐತಿಹಾಸಿಕ ದಾಖಲೆ ಬರೆಯುವಂತ 3500 ಕಿಲೋಮೀಟರ್ ಪಾದಯಾತ್ರೆ ಮಾಡಿದ್ದಾರೆ ಎಂದರು.

ಚಿತ್ರದುರ್ಗ ಜಿಲ್ಲೆಯಲ್ಲಿ ಐದು ದಿನಗಳ ಕಾಲ ಪಾದಯಾತ್ರೆ ಮಾಡಿದರು. ಇಂತಹ ಪಾದಯಾತ್ರೆಯ ಸಮಯದಲ್ಲಿ ಅಜ್ಜಿಯ ಸೌತೆಕಾಯಿ ಸ್ವೀಕರಿಸಿದ್ದರು. ಮೊಳಕಾಲ್ಮೂರಿನ ನೀರಿನ ಟ್ಯಾಂಕ್ ಮೇಲೆ ಹತ್ತಿ ರಾಷ್ಟ್ರ ಧ್ವಜ ಹಿಡಿದು ಬಾಲಕರ ಜೊತೆ ಬೆರೆತಿದ್ದನ್ನು ಸ್ಮರಿಸಿದರು.ರಾಹುಲ್ ಗಾಂಧಿ ಮಣಿಪುರದಲ್ಲಿ ನಡೆದ ಗಲಭೆ ವಿಚಾರಕ್ಕೆ ಸಂಬಂಧಿಸಿದಂತೆ



ಭಾರತ್ ಜೋಡೋ ನ್ಯಾಯ ಯಾತ್ರೆಯ ಪಾದಯಾತ್ರೆಯನ್ನು ಮಾಡುತ್ತಿದ್ದಾರೆ. ಇದರಿಂದ ಶಾಂತಿ ನೆಲೆಸುವಂತಾಗಿದೆ. ದೇಶದಲ್ಲಿ ಶಾಂತಿ ಸೌಹಾರ್ದತೆಯ ವಾತಾವರಣ ಸೃಷ್ಟಿಸುವ ಕೆಲಸವನ್ನು ನಾವೆಲ್ಲರೂ ಮಾಡಬೇಕಿದೆ ಎಂದರು.

ಜಿಲ್ಲಾ ಕಾಂಗ್ರೆಸ್‌ನ ಪ್ರಧಾನ ಕಾರ್ಯದರ್ಶಿ ಡಿಎನ್ ಮೈಲಾರಪ್ಪ ಮಾತನಾಡಿ, ಬಿಜೆಪಿಯ ಅನಂತ್ ಕುಮಾರ್ ಹೆಗಡೆ ಅವರ ಮೇಲೆ ಕೇಂದ್ರ ಸರ್ಕಾರ ಕ್ರಮವನ್ನು ಜರುಗಿಸಬೇಕು ಎಂದು ಆಗ್ರಹಿಸಿದರು.

ಸಮಯದಲ್ಲಿ ಕಾಂಗ್ರೆಸ್ ಮುಖಂಡಾದ ಮುದಾಸರ್ ನವಾಜ್, ರೈತ ಮುಖಂಡ ಲಕ್ಷ್ಮಿಕಾಂತ್, ರಾಹುಲ್ ಗಾಂಧಿ ವಿಚಾರ ಮಂಚ್ ಜಿಲ್ಲಾಧ್ಯಕ್ಷ ತಿಪ್ಪೇಸ್ವಾಮಿ, ಜಿಲ್ಲಾ ಕಾರ್ಯದರ್ಶಿ ಲಿಂಗರಾಜ್, ಬಾಷ ಇತರರಿದ್ದರು.

# ಭಕ್ತಿ, ಶ್ರದ್ದೆಯಿಂದ ಚಳ್ಳಕೆರೆಯಮ್ಮನನ್ನು ಪೂಜಿಸಿದರೆ ಸಂಕಷ್ಟಗಳ ನಿವಾರಣೆ



» ಚಳ್ಳಕೆರೆ

ಗ್ರಾಮ ದೇವತೆ ಶ್ರೀಚಳ್ಳಕೆರೆಯಮ್ಮ ಪ್ರತಿಐದು ವರ್ಷಕ್ಕೊಮ್ಮೆ ನಡೆಯುವ ವಿಶೇಷ ಜಾತ್ರೆ ಶುಕ್ರವಾರ ಸಂಜೆ ಗಾವುಸಭೆ ಮತ್ತು ಪೋತರಾಜದ ವೀರನಾಟ್ಯದೊಂದಿಗೆ ಮುಂದುವರೆದಿದ್ದು, ಶನಿವಾರ ಸಂಜೆ ಹೋಕಳಿ ಕಾರ್ಯಕ್ರಮದೊಂದಿಗೆ ಜಾತ್ರೆ ಮುಕ್ತಾಯವಾಗಲಿದೆ.

ಮಾರ್ಚ್ 11ರ ಸೋಮವಾರದಿಂದ ಜಾತ್ರೆ ಆರಂಭವಾಗಿ ಪ್ರತಿನಿತ್ಯವೂ ವಿಶೇಷ ಪೂಜೆ ಹಾಗೂ ಪ್ರಸಾದ ವಿತರಣೆಯೊಂದಿಗೆ ಕಾರ್ಯಕ್ರಮಗಳು ನಿರಂತರ ನಡೆದವು. ಮಾ. 12ರ ಮಂಗಳವಾರ ಉಡಿತುಂಬುವ ಕಾರ್ಯಕ್ರಮಕ್ಕೆ ಸಾವಿರಾರು ಭಕ್ತರು ಆಗಮಿಸಿ ತಾಯಿಗೆ ತಮ್ಮ ಹರಿಕೆಯಂತೆ ಸಿರೆಗಳನ್ನು ಸಮರ್ಪಿಸಿದರು.

ಮಾರ್ಚ್ 15ರ ಶುಕ್ರವಾರ ಶ್ರೀಚಳ್ಳಕೆರೆಯಮ್ಮ ದೇವಸ್ಥಾನಕ್ಕೆ ಭೇಟಿ ನೀಡಿದ ತಾಲ್ಲೂಕು ಬ್ರಾಹ್ಮಣ ಸಂಘದ ಅಧ್ಯಕ್ಷ, ಕಾರ್ಯದರ್ಶಿ ಹಾಗೂ ಪದಾಧಿಕಾರಿಗಳು ಚಳ್ಳಕೆರೆ ಜನತೆಯ ಪರವಾಗಿ ಪೂಜಾ ಕಾರ್ಯಕ್ರಮ ನಡೆಸಿ, ಈ ಭಾಗದ ಜನರಿಗೆ ಮಳೆ, ಬೆಳೆ ಕೊಟ್ಟು ಎಲ್ಲಾ ಸಂಕಷ್ಟಗಳಿಂದ ಪಾರು ಮಾಡಿ ಈ ಭಾಗದ ಜನರ ಕಲ್ಯಾಣಕ್ಕಾಗಿ ಹಾರೈಸಬೇಕೆಂದು ನಮಿಸಿ ಪೂಜಾ ಕಾರ್ಯಗಳನ್ನು ನಡೆಸಿದರು.

ಸಂಘದ ಅಧ್ಯಕ್ಷ ಡಾ.ಅನಂತರಾಮ್ ಗೌತಮ್, ಬಯಲುಸೀಮೆಯ ಚಳ್ಳಕೆರೆ ಹಿಂದಿನ ಇತಿಹಾಸದಲ್ಲಿ ಚಲುವಕೆರೆ ಎಂದು ನಾಮಕಾರಣವಾಗಿತ್ತು. ವೀರಮದಕರಿನಾಯಕರ ಆಳ್ವಿಕೆಯಲ್ಲಿ ದೊಡ್ಡೇರಿ ಪ್ರಧಾನ ಆಡಳಿತ ಕೇಂದ್ರವಾಗಿ ಕಾರ್ಯನಿಹಿಸಿದೆ. ಆಸಂದರ್ಭದಲ್ಲಿ ತಾಯಿ ಚಳ್ಳಕೆರೆಯಮ್ಮ ಪ್ರಾರಂಭದಲ್ಲಿ ಕಾಟಪ್ಪನಹಟ್ಟಿಯಲ್ಲಿ ಬಂದು ನೆಲೆಸಿ, ನಂತರ ಭವ್ಯವಾದ ದೇವಸ್ಥಾನ ನಿರ್ಮಾಣವಾಗಿ ತಾಯಿ ಇಲ್ಲೇ ಸಕಲಸದ್ಭಕ್ತರನ್ನು ಸಲುಹುತ್ತಿದ್ದಾಳೆ. ಶ್ರೀಚಳ್ಳಕೆರೆಯಮ್ಮನ ಮಹಿಮೆ ಅಪಾರವಾಗಿದೆ. ಶ್ರದ್ಧಾಭಕ್ತಿಯಿಂದ ಪೂಜಿಸಿ ಸಂಪ್ರದಾಯ ಬದ್ದವಾಗಿ ಆಕೆಯನ್ನು ಗೌರವಿಸಿದರೆ ಅವರ ಇಷ್ಟಾರ್ಥ ಹಾಗೂ ಬೇಡಿಕೆಗಳನ್ನು ತಾಯಿ ಈಡೇರಿಸುತ್ತಾಳೆ. ಪ್ರಸ್ತುತ ಜಾತ್ರೆಯಲ್ಲಿ ಸುಮಾರು ಒಂದು ಲಕ್ಷಕ್ಕೂ ಹೆಚ್ಚು ಜನರು ದೇವಸ್ಥಾನಕ್ಕೆ ಭೇಟಿ ನೀಡಿ ತಮ್ಮ ಭಕ್ತಿಸಮರ್ಪಿಸಿದ್ದಾರೆ. ಈ ಪರಂಪರೆ ಹೀಗೆ ಮುಂದುವರೆಯಲಿ ಎಂದು ಎಲ್ಲಾ ಭಕ್ತರ ಪರವಾಗಿ ತಾಯಿಯನ್ನು ಪ್ರಾರ್ಥಿಸಿರುವುದಾಗಿ ತಿಳಿಸಿದರು.

# ವಾರ್ತಾ ಇಲಾಖೆಯಿಂದ ವಸ್ತು ಪ್ರದರ್ಶನ: ಜಿ.ಪಂ. ಸಿಇಓ ಉದ್ಘಾಟನೆ

» ಚಿತ್ರದುರ್ಗ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳು, ಇತರೆ ಅಭಿವೃದ್ಧಿ ಯೋಜನೆಗಳು ಮತ್ತು ಕಾರ್ಯಕ್ರಮಗಳ ಬಗ್ಗೆ ಅರಿವು ಮೂಡಿಸಲು ನಗರದ ಕೆ.ಎಸ್.ಆರ್.ಟಿ.ಸಿ. ಕೇಂದ್ರ ಬಸ್ ನಿಲ್ದಾಣದಲ್ಲಿ ಏರ್ಪಡಿಸಿರುವ ವಸ್ತು ಪ್ರದರ್ಶನ ಮಳಿಗೆಯನ್ನು ಜಿ.ಪಂ. ಸಿಇಓ ಎಸ್.ಜೆ. ಸೋಮಶೇಖರ್ ಹಾಗೂ ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಅವರು ಶುಕ್ರವಾರ ಉದ್ಘಾಟಿಸಿದರು.

ರಾಜ್ಯ ಸರ್ಕಾರವು ಪ್ರತಿಯೊಬ್ಬ ಅರ್ಹ ಫಲಾನುಭವಿಗಳಿಗೆ ಗ್ಯಾರಂಟಿ ಯೋಜನೆಗಳನ್ನು ತಲುಪಿಸಲು ಮತ್ತು ಸರ್ಕಾರದ ವಿವಿಧ




ಯೋಜನೆಗಳ ಮಾಹಿತಿ ನೀಡಲು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಕೇಂದ್ರ ಬಸ್ ನಿಲ್ದಾಣದಲ್ಲಿ ವಸ್ತು ಪ್ರದರ್ಶನ ಮಳಿಗೆಯನ್ನು ಹಾಕಲಾಗಿದೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಮಾಹಿತಿ ಪಡೆಯಬಹುದಾಗಿದೆ.

## ಪ್ರಮುಖ ಸುದ್ದಿ

### ಪೂರ್ವ ಸಿದ್ಧತಾ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿಕೆ

# ಎಸ್‌ಎಸ್‌ಎಲ್‌ಸಿ ಪರೀಕ್ಷೆ ಪಾವಿತ್ರ್ಯತೆ ಹಾಗೂ ನೈತಿಕತೆ ಕಾಪಾಡಿ

» ಚಿತ್ರದುರ್ಗ

ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆ ವಿದ್ಯಾರ್ಥಿ ಜೀವನದ ಮಹತ್ತರ ಘಟ್ಟವಾಗಿದೆ. ಈ ಪರೀಕ್ಷೆ ವಿದ್ಯಾರ್ಥಿಗಳ ಮೌಲ್ಯಮಾಪನದ ಜೊತೆಗೆ, ಶಿಕ್ಷಕರ ಬೋಧನಾ ಸಾಮಾರ್ಥ್ಯ ಹಾಗೂ ಶೈಕ್ಷಣಿಕ ವ್ಯವಸ್ಥೆಯ ಮೌಲ್ಯಮಾಪನದ ಮಾನದಂಡವು ಆಗಿದೆ. ಹೀಗಾಗಿ ಪರೀಕ್ಷೆ ಪಾವಿತ್ರ್ಯತೆ ಹಾಗೂ ನೈತಿಕತೆಯನ್ನು ಕಾಪಾಡುವ ನಿಟ್ಟಿನಲ್ಲಿ ಪರೀಕ್ಷಾ ಕಾರ್ಯಗಳನ್ನು ಮುತುವರ್ಜಿಯಿಂದ ನಿರ್ವಹಿಸುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಧಿಕಾರಿಗಳಿಗೆ ಹೇಳಿದರು.ಎಸ್‌ಎಸ್‌ಎಲ್‌ಸಿ ಪರೀಕ್ಷೆ ಕುರಿತು ನಗರದ ಉಪವಿಭಾಗಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಪರೀಕ್ಷಾ ಪೂರ್ವ ಸಿದ್ಧತಾ ಕಾರ್ಯಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಸರ್ಕಾರ ಎಸ್.ಎಸ್.ಎಲ್.ಸಿ ಪರೀಕ್ಷೆಗಳನ್ನು ಗಂಭೀರವಾಗಿ ಪರಿಗಣಿಸಿದೆ. ಪರೀಕ್ಷಾ ಕಾರ್ಯಗಳಲ್ಲಿ ಎಲ್ಲೂ ಲೋಪವಾಗದಂತೆ ನೋಡಿಕೊಳ್ಳಿ.



ಎಲ್ಲಾ ತಾಲ್ಲೂಕು ಉಪಖಜಾನೆಗಳಿಂದ ನಿಗದಿವೇಳೆಗೆತಹಶೀಲ್ದಾರ್,ಬಿಇಓಹಾಗೂ ಖಜಾನಾಧಿಕಾರಿಗಳ ನೇತೃತ್ವದಲ್ಲಿ ಪರೀಕ್ಷಾ ಪತ್ರಿಕೆ ಹಾಗೂ ಖಾಲಿ ಉತ್ತರ ಪತ್ರಿಕೆಗಳನ್ನು ಹೊರತೆಗದು ಮಾರ್ಗಾಧಿಕಾರಿಗಳಿಗೆ ನೀಡಬೇಕು. ಪರೀಕ್ಷಾ ನಂತರ ಉತ್ತರ ಪತ್ರಿಕೆಗಳನ್ನು ಮಾರ್ಗಾಧಿಕಾರಿಗಳೇ ಸ್ಟ್ರಾಂಗ್ ರೂಮ್‌ಗೆ ತಲುಪಿಸಬೇಕು. ಈ ಸಮಯದಲ್ಲಿ ತಪ್ಪದೇ ಪೊಲೀಸ್ ಭದ್ರತೆಯನ್ನು ಪಡೆದುಕೊಳ್ಳಬೇಕು. ಜಿಲ್ಲೆಯಲ್ಲಿ ಗುರುತಿಸಲಾಗಿರುವ 5 ಸೂಕ್ಷ್ಮ ಪರೀಕ್ಷಾ ಕೇಂದ್ರಗಳಲ್ಲಿ ಭದ್ರತೆಗಾಗಿ ಹೆಚ್ಚುವರಿ ಪೊಲೀಸರನ್ನು ನೇಮಿಸಬೇಕು. ಬೇಸಿಗೆ ಕಾಲವಾದ್ದರಿಂದ ಎಲ್ಲಾ ಪರೀಕ್ಷೆ ಕೇಂದ್ರಗಳಲ್ಲಿ ವಿದ್ಯಾರ್ಥಿಗಳಿಗೆ ಶುದ್ಧ ಕುಡಿಯವ ನೀರಿನ ವ್ಯವಸ್ಥೆ ಕಲ್ಪಿಸಬೇಕು. ಪ್ರತಿ ಪರೀಕ್ಷಾ ಕೇಂದ್ರಗಳಲ್ಲಿಯೂ ಪ್ರಥಮ ಚಿಕಿತ್ಸಾ ಪರಿಕರದೊಂದಿಗೆ ಆರೋಗ್ಯ ಸಿಬ್ಬಂದಿಯನ್ನು ನೇಮಿಸಬೇಕು. ಸಾರಿಗೆ ಅಧಿಕಾರಿಗಳು ಮಾರ್ಗಾಧಿಕಾರಿಗಳಿಗೆ ಅಗತ್ಯ ಇರುವ ವಾಹನಗಳನ್ನು ಒದಗಿಸುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಸೂಚನೆ ನೀಡಿದರು.

ಮಾರ್ಚ್ 25 ರಿಂದ ಏಪ್ರಿಲ್ 06 ವರೆಗೆ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆ ನಡೆಯಲಿದೆ. ಜಿಲ್ಲೆಯಲ್ಲಿ 78 ಕೇಂದ್ರದಲ್ಲಿ 24,228 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. 5 ಸೂಕ್ಷ್ಮ ಪರೀಕ್ಷಾ ಕೇಂದ್ರಗಳನ್ನು ಗುರುತಿಸಲಾಗಿದೆ. ಪ್ರಶ್ನೆ ಪತ್ರಿಕೆ ಹಾಗೂ ಉತ್ತರ ಪತ್ರಿಕೆಗಳ ಸಾಗಾಟಕ್ಕೆ ಒಟ್ಟು 34 ಮಾರ್ಗಗಳನ್ನು ಗುರುತಿಸಲಾಗಿದೆ ಎಂದು ಚಿತ್ರದುರ್ಗ ಬಿಇಓ ನಾಗಭೂಷಣ್ ಸಭೆಯಲ್ಲಿ ಮಾಹಿತಿ ನೀಡಿದರು.

ಒಟ್ಟು 24228 ವಿದ್ಯಾರ್ಥಿಗಳು : ಮಾ. 25 ರಿಂದ ಜಿಲ್ಲೆಯ 78 ಪರೀಕ್ಷಾ ಕೇಂದ್ರಗಳಲ್ಲಿ ಜರುಗುವ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಯಲ್ಲಿ ಜಿಲ್ಲೆಯ 24228 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದಾರೆ. ಚಳ್ಳಕೆರೆ ತಾಲ್ಲೂಕಿನ 18 ಪರೀಕ್ಷಾ ಕೇಂದ್ರಗಳಲ್ಲಿ 5387 ವಿದ್ಯಾರ್ಥಿಗಳು, ಚಿತ್ರದುರ್ಗ ತಾಲ್ಲೂಕಿನ 21 ಪರೀಕ್ಷಾ ಕೇಂದ್ರಗಳಲ್ಲಿ 6662 ವಿದ್ಯಾರ್ಥಿಗಳು, ಹಿರಿಯೂರು ತಾಲ್ಲೂಕಿನ 13 ಪರೀಕ್ಷಾ ಕೇಂದ್ರಗಳಲ್ಲಿ 3716 ವಿದ್ಯಾರ್ಥಿಗಳು, ಹೊಳಲ್ಕೆರೆ ತಾಲ್ಲೂಕಿನ 08 ಪರೀಕ್ಷಾ ಕೇಂದ್ರಗಳಲ್ಲಿ 2739 ವಿದ್ಯಾರ್ಥಿಗಳು, ಹೊಸದುರ್ಗ ತಾಲ್ಲೂಕಿನ 10 ಪರೀಕ್ಷಾ ಕೇಂದ್ರಗಳಲ್ಲಿ 3333 ವಿದ್ಯಾರ್ಥಿಗಳು, ಮೊಳಕಾಲ್ಮೂರು ತಾಲ್ಲೂಕಿನ 8 ಪರೀಕ್ಷಾ ಕೇಂದ್ರಗಳಲ್ಲಿ 2391 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ.

ಸಭೆಯಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎ.ವಿ. ಲಕ್ಷ್ಮೀನಾರಾಯಣ, ನಾಸೀರುದ್ದಿನ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಬಿ.ಇಡಿ ಆತ್ಮವಿಶ್ವಾಸ ಮೂಡಿಸುವ ಕೋರ್ಸ್

» ಮೊದಲ ಪುಟದಿಂದ

ಈ ವೇಳೆ ಕಾರ್ಯಕ್ರಮದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ತಾಲೂಕು ವಿಸ್ತರಣಾಧಿಕಾರಿ ಕೆ.ಸಿ. ಶಶಿಧರ್, ಕಾಲೇಜು ಪ್ರಾಂಶುಪಾಲ ಟಿ.ಬಸಪ್ಪ, ಸಂಸ್ಥೆಯ ಧರ್ಮದರ್ಶಿಗಳಾದ ಎಂ.ಹೆಚ್. ನೀಲಕಂಠಯ್ಯ, ವೀಣಾ ನಟರಾಜ್, ಲೀಲಾ ಏಕಾಂತರಾಜ್, ವಿಜಯ ಶಿವಲಿಂಗಪ್ಪ, ವೇದಮೂರ್ತಿ, ಎಂ.ಬಿ.ತಿಪ್ಪೇಸ್ವಾಮಿ, ಉಪನ್ಯಾಸಕರಾದ ಭುವನೇಶ್, ನೀರಗುಂದ ಸುರೇಶ್, ನಾಗಭೂಷಣ್, ಶ್ರೀನಿವಾಸ್, ರೇಖಾ, ಗೌರಿ ಚಿನ್ಮಯಿ ಮತ್ತು ಸಂತೋಷ್ ಸೇರಿದಂತೆ ಪ್ರಥಮ ಮತ್ತು ದ್ವಿತೀಯ ವರ್ಷದ ನೂರಾರು ಪ್ರಶಿಕ್ಷಣಾರ್ಥಿಗಳಿದ್ದರು.

### ವಿದ್ಯಾರ್ಥಿನಿ ನಾಪತ್ತೆ

» ಹೊಳಲ್ಕೆರೆ

2023 ಸೆ.21 ರಂದು ನಿಗೂಡವಾಗಿ ನಾಪತ್ತೆಯಾದ 16ವರ್ಷ ವಿದ್ಯಾರ್ಥಿನಿ ಪಲ್ಲವಿ ಪತ್ತೆಗೆ ಸಾರ್ವಜನಿಕರು ಸಹಕಾರ ನೀಡಬೇಕೆಂದು ಹೊಳಲ್ಕೆರೆ ಪೊಲೀಸ್ ಪಿಎಸ್‌ಐ ಸುರೇಶ್ ತಿಳಿಸಿದ್ದಾರೆ. ತಾಲೂಕಿನ ಗಂಗಸಮುದ್ರದ ಮಲ್ಲಿಕಾರ್ಜುನ್ ಇವರ ಪುತ್ರಿ 16 ವರ್ಷ ಪಲ್ಲವಿ ಚಿಕ್ಕಮಂಗಳೂರು ಜಿಲ್ಲೆಯ ಕಡೂರು ತಾಲೂಕಿನ ಬೀರೂರಿನಲ್ಲಿ ತರಳುಬಾಳು



ವಿದ್ಯಾ ಸಂಸ್ಥೆ ಅಕ್ಕಮಹಾದೇವ ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದರು. ಗೌರಿ ಗಣೇಶ್ ಹಬ್ಬಕ್ಕೆ ಸ್ವಗ್ರಾಮ ಗಂಗಸಮುದ್ರಕ್ಕೆ ಬಂದಿದ್ದರು. ಹಬ್ಬ ಮುಗಿಸಿಕೊಂಡು ಶಾಲೆಗೆ ಹೋಗಲು ರಾಮಗಿರಿಯ ರೈಲ್ವೆ ನಿಲ್ದಾಣದಲ್ಲಿ ಪಲ್ಲವಿ ತಂದೆ ಮಲ್ಲಿಕಾರ್ಜುನಪ್ಪ ಬೀರೂರು ಕಡೆಗೆ ಹೋಗುವ ರೈಲಿಗೆ 2023 ಸೆ.21 ರಂದು ಹತ್ತಿಸಿ ಬಂದಿರುತ್ತಾರೆ. ಅದರೆ ಸೆ. 24 ರಂದು ಪಲ್ಲವಿಯನ್ನು ಶಾಲೆ ಕಳುಹಿಸುವಂತೆ ಶಿಕ್ಷಕರು ಪೋನ್ ಮಾಡಿದ್ದಾರೆ. 21ನೇ ತಾರೀಖ್ ಶಾಲೆ ಕಳುಹಿಸಿದ್ದಾಗಿ ತಿಳಿಸಿದ್ದು, ಶಾಲೆ ವಿದ್ಯಾರ್ಥಿ ಬಂದಿಲ್ಲ ಎನ್ನುವ ಮಾಹಿತಿ ಪಡೆದುಕೊಂಡು ಪೋಷಕರು 27-09-2023 ರಂದು ಹೊಳಲ್ಕೆರೆ ಪೊಲೀಸ್ ಠಾಣೆಯಲ್ಲಿ ಅಪಹರಣ ಪ್ರಕರಣ ದಾಖಲಿಸಿದ್ದಾರೆ. ಪಲ್ಲವಿ ಪತ್ತೆಗಾಗಿ ಪೋಲಿಸ್ ಸಾಕಷ್ಟು ವಿಚಾರಣೆ ಕೈಗೊಂಡಿದ್ದಾರೆ. ಅದರೇ ಇನ್ನು ಪತ್ತೆಯಾಗಿಲ್ಲವಾದರಿಂದ ಸಾರ್ವಜನಿಕರು ಪಲ್ಲವಿ ಕಂಡು ಬಂದಲ್ಲಿ ತಕ್ಷಣವೇ ಪೊಲೀಸ್ ಠಾಣೆಗೆ ಮಾಹಿತಿ ನೀಡಬೇಕೆಂದು ಕೋರಿದ್ದಾರೆ.

### ಕುಡಿಯುವ ನೀರಿನ ಸಹಾಯವಾಣಿ ಕೇಂದ್ರ ತೆರೆದ ಪುರಸಭೆ

» ಹೊಸದುರ್ಗ

ಪಟ್ಟಣದಲ್ಲಿ ಸಮರ್ಪಕ ಕುಡಿಯುವ ನೀರನ್ನು ಪೂರೈಸಲು ಶಾಸಕರಾದ ಬಿ.ಜಿ.ಗೋವಿಂದಪ್ಪ ಕಟ್ಟುನಿಟ್ಟಿನ ಸೂಚನೆಯನ್ನು ಅಧಿಕಾರಿಗಳಿಗೆ



ನೀಡಿದ್ದು ಪಟ್ಟಣದ 23 ವಾರ್ಡ್‌ಗಳಲ್ಲಿ ಪುರಸಭಾ ಸದಸ್ಯರ ಸಹಯೋಗದೊಂದಿಗೆ ನೀರನ್ನು ಪೂರೈಸಲಾಗುತ್ತಿದ್ದು ಜಿಲ್ಲಾಧಿಕಾರಿಗಳ ಸೂಚನೆಯಂತೆ ಶುದ್ಧ ಕುಡಿಯುವ ನೀರನ್ನು ಘಟಕಗಳ ಮೂಲಕ ಪೂರೈಸಲಾಗುತ್ತಿದೆ ಎಂದು ಪುರಸಭಾ ಮುಖ್ಯಾಧಿಕಾರಿ ತಿಮ್ಮರಾಜು ಜಿ.ವಿ.ತಿಳಿಸಿದ್ದಾರೆ. ಈ ಕುರಿತು ಶುಕ್ರವಾರ ಮಾಧ್ಯಮದವರಿಗೆ ಮಾಹಿತಿ ನೀಡಿದ ಅವರು ವಾರಕ್ಕೊಮ್ಮೆ ಆರೋಗ್ಯ ಇಲಾಖೆಯ ಲ್ಯಾಬ್‌ನಲ್ಲಿ ಗುಣಮಟ್ಟ ಪರೀಕ್ಷಿಸಿ ಕುಡಿಯಲು ಯೋಗ್ಯವಿರುವ ಬಗ್ಗೆ ಖಾತ್ರಿ ಪಡಿಸಿಕೊಂಡು ನೀರನ್ನು ಪೂರೈಸಲಾಗುತ್ತಿದೆ.ಸಾರ್ವಜನಿಕರು ಕುಡಿಯುವ ನೀರಿನ ಸಮಸ್ಯೆ ಕಂಡುಬಂದಲ್ಲಿ ಪುರಸಭೆಯಿಂದ ತೆರೆಯಲಾಗಿರುವ ಸಹಾಯವಾಣಿ ಕೇಂದ್ರ ಸಂಖ್ಯೆ: 08199-295095ಕ್ಕೆ ದೂರನ್ನು ದಾಖಲಿಸಬಹುದಾಗಿದೆ ಎಂದು ತಿಳಿಸಿದರು.ಈ ಕೇಂದ್ರದಲ್ಲಿ 24*7 ರೀತ್ಯಾ 3 ಜನ ಸಿಬ್ಬಂದಿಗಳಾದ ಅಶ್ವಿನಿ:7022443583, ತಿಪ್ಪೇಶ್:9886603638 ಮತ್ತು ಸಂತೋಷ್:7676058868 ನಿಯೋಜನೆ ಮಾಡಲಾಗಿದ್ದು ಕಾರ್ಯನಿರ್ವಹಿಸುತ್ತಿದ್ದಾರೆ. ವಾರ್ಡ್ ಮಟ್ಟದಲ್ಲಿ ನೀರಿನ ವಾಲ್‌ಮೆನ್‌ಗಳಾದ ಶ್ರೀನಿವಾಸ್: 9902532429, ಕೃಷ್ಣಪ್ಪ: 9972676088 (ವಾರ್ಡ್ ನಂ:12,18-23), ತಿಮ್ಮರಾಜು: 7338082014 (ವಾರ್ಡ್ ನಂ 1-5), ಬಸವರಾಜು: 8971644641 (ವಾರ್ಡ್ ನಂ 5,13,14,15), ಲೋಕೇಶ್ ಮೂರ್ತಿ: 9880056373 (ವಾರ್ಡ್ ನಂ 9,10,11), ರಾಜು: 9739479062 (ವಾರ್ಡ್ ನಂ 6,7,8,16,17) ಕಾರ್ಯನಿರ್ವಹಿಸುತ್ತಿದ್ದು ಸಾರ್ವಜನಿಕರು ನೀರಿನ ಸಮಸ್ಯೆ ಕಂಡುಬಂದಲ್ಲಿ ದೂರವಾಣಿಗೆ ಸಂಪರ್ಕಿಸಬಹುದು.

### ಪ್ರಾಣಿ ಬಲಿ ನಿಷೇಧ

» ದಾವಣಗೆರೆ

ಸಾರ್ವಜನಿಕ ಹಿತದೃಷ್ಟಿಯಿಂದಾಗಿ, ಪರಿಸರ ನೈರ್ಮಲ್ಯ ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡುವ ಸಲುವಾಗಿ ಮಾ.17 ರಿಂದ 20 ರವರೆಗೆ ನೆಡೆಯುವ ದಾವಣಗೆರೆ ನಗರದೇವತೆ ಶ್ರೀ ದುಗಾರ್ಂಬಿಕಾದೇವಿ ಯಾವುದೇ ರೀತಿಯ ಪ್ರಾಣಿ ಬಲಿ ನೀಡುವುದನ್ನು ಮತ್ತು ಇತರೆ ಪ್ರಾಣಿಗಳನ್ನು ತೆಗೆದುಕೊಂಡು ಬರುವುದು, ಮಾರಕಾಸ್ತ್ರಗಳನ್ನು ತರುವುದು ಹಾಗೂ ಇತರೆ ಅನಾಗರೀಕ ಪದ್ಧತಿಗಳನ್ನು ಮಾಡುವ ಆಚರಣೆಗಳನ್ನು ನಿಷೇಧಿಸಿಲಾಗಿದೆ.

### ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಜಿಲ್ಲಾ ಪ್ರಾಧಿಕಾರ ಅಸ್ತಿತ್ವಕ್ಕೆ

# ಅರ್ಹ ಫಲಾನುಭವಿಗಳಿಗೆ ಯೋಜನೆಯ ಲಾಭ ದೊರೆಯಲಿ: ಪ್ರಾಧಿಕಾರದ ಅಧ್ಯಕ್ಷ ಶಿವಣ್ಣ ಹೇಳಿಕೆ

» ಚಿತ್ರದುರ್ಗ

ರಾಜ್ಯ ಸರ್ಕಾರ ಜಾರಿಗೆ ತಂದಿರುವ ಪಂಚ ಗ್ಯಾರಂಟಿ ಯೋಜನೆಗಳ ಲಾಭ ಅರ್ಹ ಫಲಾನುಭವಿಗಳಿಗೆ ದೊರೆಯಬೇಕು. ಜಿಲ್ಲಾಡಳಿತದೊಂದಿಗೆ ಸಮನ್ವಯ ವಹಿಸಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಕಾರ್ಯನಿರ್ವಹಿಸಲಿದೆ ಎಂದು ಅಧ್ಯಕ್ಷ ಆರ್.ಶಿವಣ್ಣ ಹೇಳಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಪ್ರಥಮ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ತಾಂತ್ರಿಕ ಕಾರಣಗಳಿಂದಾಗಿ ಫಲಾನುಭವಿಗಳು ಗ್ಯಾರಂಟಿ ಯೋಜನೆಗಳಿಂದ ವಂಚಿತರಾಗಬಾರದು. ಗ್ರಾಮ ಮಟ್ಟದಲ್ಲಿ ಪ್ರಾಧಿಕಾರದ ಉಪಾಧ್ಯಕ್ಷರು ಹಾಗೂ ಸದಸ್ಯರು ಕಾರ್ಯನಿರ್ವಹಿಸಿ ತೊಂದರೆಗಳನ್ನು ಪರಿಹರಿಸಬೇಕು. ಪಕ್ಷಾತೀತವಾಗಿ ಕೆಲಸ ನಿರ್ವಹಿಸಬೇಕು. ಸರ್ಕಾರದ ಎಲ್ಲಾ ಯೋಜನೆಗಳು ನೇರವಾಗಿ ಫಲಾನುಭವಿಗಳಿಗೆ ದೊರಕಲಿವೆ. ಇದರಲ್ಲಿ ಯಾವುದೇ ವೈಯಕ್ತಿಕ ಹಿತಾಸಕ್ತಿಯಿಲ್ಲ. ಸಮಾಜಮುಖಿಯಾಗಿ ಬಡವರಿಗೆ ನೆರವಾಗಲು ಮುಖ್ಯಮಂತ್ರಿ ಸಿದ್ದರಾಮಯ್ಯನವರು, ಯೋಜನೆ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಸೇರಿದಂತೆ ಎಲ್ಲಾ ಶಾಸಕರು ಹಾಗೂ ಜನಪ್ರತಿನಿಧಿಗಳು ನಮ್ಮನ್ನು ನೇಮಿಸಿದ್ದಾರೆ ಎಂದು ಅಧ್ಯಕ್ಷ ಆರ್.ಶಿವಣ್ಣ ಹೇಳಿದರು.

3.70 ಲಕ್ಷ ಕುಟುಂಬಗಳಿಗೆ ಅನ್ನಭಾಗ್ಯ ಹಾಗೂ ಗೃಹಲಕ್ಷ್ಮೀ ಯೋಜನೆ ಲಾಭ :

ಚಿತ್ರದುರ್ಗ ಜಿಲ್ಲೆಯಲ್ಲಿ ಒಟ್ಟು 4.01 ಲಕ್ಷ ಬಿ.ಪಿ.ಎಲ್ ಹಾಗೂ ಎ.ಪಿ.ಎಲ್ ಕಾರ್ಡುಗಳು ಇವೆ. ಇದರಲ್ಲಿ 3.70 ಲಕ್ಷ ಕುಟುಂಬಗಳು ಅನ್ನಭಾಗ್ಯ ಯೋಜನೆಯ ಲಾಭ ಪಡೆಯುತ್ತಿವೆ. ಯೋಜನೆಯಡಿ ಪ್ರತಿ ಕುಟುಂಬ ಸದಸ್ಯರಿಗೆ ತಲಾ 5 ಕೆ.ಜಿ. ಅಕ್ಕಿ ನೀಡಲಾಗುತ್ತಿದೆ. ಉಳಿದ 5 ಕೆ.ಜಿ. ಅಕ್ಕಿಗೆ ಪ್ರತಿಯಾಗಿ ತಲಾ ರೂ.170 ರೂಪಾಯಿಗಳನ್ನು ಡಿಬಿಟಿ ಮುಖಾಂತರ ಫಲಾನುಭವಿಗಳಿಗೆ ನೀಡಲಾಗುತ್ತಿದೆ. ಇದುವರೆಗೂ 3.60 ಲಕ್ಷ ಪಡಿತರ ಕಾರ್ಡುದಾರ ಖಾತೆ ಹಣ ವರ್ಗಾವಣೆಯಾಗುತ್ತಿದೆ. ಬಯೋಮೆಟ್ರಿಕ್ ಸೇರಿದಂತೆ ಇತರೆ ತಾಂತ್ರಿಕ ಕಾರಣಗಳಿಗಾಗಿ 10 ಸಾವಿರ ಫಲಾನುಭವಿಗಳ ಖಾತೆಗೆ ನೇರ ನಗದು ವರ್ಗಾವಣೆ ಸಾಧ್ಯವಾಗಿಲ್ಲ. ಇದರ ಬಗ್ಗೆ ಸರ್ಕಾರಕ್ಕೆ ವರದಿ ನೀಡಲಾಗಿದೆ. ಸರ್ಕಾರ ನಿರ್ದೇಶನ ಅನುಸರಿಸಿ ಮುಂದಿನ ಕ್ರಮ ಕೈಗೊಳ್ಳುವುದಾಗಿ ಆಹಾರ ಇಲಾಖೆ ಜಂಟಿ ನಿರ್ದೇಶಕ ಮಧುಸೂಧನ್ ಸಭೆಯಲ್ಲಿ ಮಾಹಿತಿ ನೀಡಿದರು.

ಶೀಘ್ರವೇ ಸರ್ಕಾರದಿಂದ ಹೊಸ ಬಿ.ಪಿ.ಎಲ್ ಕಾರ್ಡು ವಿತರಣೆ ಆರಂಭಿಸುವಂತೆ ರಾಜ್ಯ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರಕ್ಕೆ ಮನವಿ ಸಲ್ಲಿಸುವ ಕುರಿತು ಸಭೆಯಲ್ಲಿ ನಿರ್ಧಾರ ಕೈಗೊಳ್ಳಲಾಯಿತು.

ಜಿಲ್ಲೆಯಲ್ಲಿ ಒಟ್ಟು 3.84 ಲಕ್ಷಕ್ಕೂ ಅಧಿಕ ಮಹಿಳೆಯರು ಗೃಹಲಕ್ಷ್ಮೀ ಯೋಜನೆಯಡಿ ನೊಂದಣಿ ಮಾಡಿಕೊಂಡಿದ್ದಾರೆ. ಇದರಲ್ಲಿ 3.60 ಲಕ್ಷ ಮಹಿಳೆಯರ ಖಾತೆಗೆ ಪ್ರತಿ ತಿಂಗಳು ರೂ.2000 ಜಮೆ ಮಾಡುತ್ತಿರುವುದಾಗಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್ ಸಭೆಯಲ್ಲಿ ತಿಳಿಸಿದರು.

**ಶಕ್ತಿಯೋಜನೆಯಡಿ1.52ಕೋಟಿಮಹಿಳೆಯರ ಪ್ರಯಾಣ:** ಶಕ್ತಿ ಯೋಜನೆಯ ಜಾರಿ ನಂತರ ಚಿತ್ರದುರ್ಗ ಜಿಲ್ಲೆಯ ವಿಭಾಗೀಯ ಬಸ್‌ಗಳಲ್ಲಿ 1.52 ಕೋಟಿ ಅಧಿಕ ಮಹಿಳೆಯರು ಪ್ರಯಾಣ ಮಾಡಿದಾರೆ. ಪ್ರತಿದಿನ 60 ಸಾವಿರ ಮಹಿಳೆಯರು ಬಸ್‌ಗಳಲ್ಲಿ ಸಂಚರಿಸುತ್ತಿದ್ದಾರೆ. ಚಿತ್ರದುರ್ಗ ವಿಭಾಗಕ್ಕೆ ಶಕ್ತಿ ಯೋಜನೆಯಿಂದ ಒಟ್ಟು ರೂ.52 ಕೋಟಿ ಲಾಭ ಲಭಿಸಿದೆ. ಬಸ್‌ಗಳಲ್ಲಿ ಪ್ರಯಾಣಿಕರ ದಟ್ಟಣೆ ಕಡಿಮೆ ಮಾಡಲು ಹೊಸ ಬಸ್‌ಗಳ ಖರೀದಿಗೆ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ. ವಿಭಾಗಕ್ಕೆ 10 ಹೊಸ ಬಸ್‌ಗಳು ಸೇರ್ಪಡೆಯಾಗಿವೆ ಎಂದು ಚಿತ್ರದುರ್ಗ ವಿಭಾಗೀಯ ನಿಯಂತ್ರಣಾಧಿಕಾರಿ ಸಿದ್ದೇಶ್ವರ ಹೆಬ್ಬಾಳ ಮಾಹಿತಿ ನೀಡಿದರು.

ಕೆಲ ಚಾಲಕರು ಹಾಗೂ ನಿರ್ವಾಹಕರು ಶಕ್ತಿ ಯೋಜನೆ ಬಗ್ಗೆ ಟೀಕೆ ಮಾಡುವುದು ಕಂಡುಬರುತ್ತಿದೆ. ಇದಕ್ಕೆ ಕಡಿವಾಣ ಹಾಕಬೇಕು. ನಿಯಮ ಮೀರಿದವರ ವಿರುದ್ಧ ಶಿಸ್ತುಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ತೀರ್ಮಾನಿಸಲಾಯಿತು.

3.67 ಲಕ್ಷಕ್ಕೂ ಅಧಿಕ ಗೃಹ ಬಳಕೆದಾರರು ಗೃಹಜ್ಯೋತಿ ಯೋಜನೆಯಡಿ ಉಚಿತ ವಿದ್ಯುತ್ ಲಾಭ ಪಡೆಯುತ್ತಿದ್ದಾರೆ. ಚಿತ್ರದುರ್ಗ ಬೆಸ್ಕಾಂಗೆ ಯೋಜನೆಯಿಂದ ವಾರ್ಷಿಕವಾಗಿ ರೂ.13.84 ಕೋಟಿಯನ್ನು ಸರ್ಕಾರ ಪಾವತಿ ಮಾಡುವುದು ಎಂದು ಬೆಸ್ಕಾಂ ಇಂಜಿಯರ್ ಜಯಣ್ಣ ಸಭೆಗೆ ತಿಳಿಸಿದರು.ಜಿಲ್ಲೆಯಲ್ಲಿ 4023 ಯುವಕರು ಯುವನಿಧಿ ಯೋಜನೆಯಡಿ ನೊಂದಣಿ ಮಾಡಿಕೊಂಡಿದ್ದಾರೆ. ಇದರಲ್ಲಿ 2379 ಜನರಿಗೆ ಈಗಾಗಲೇ ನೇರವಾಗಿ ಹಣ ವರ್ಗಾವಣೆ ಮಾಡಲಾಗಿದೆ ಎಂದು ಜಿಲ್ಲಾ ಉದ್ಯೋಗಾಧಿಕಾರಿ ಕಿಶೋರ್ ಕುಮಾರ್ ತಿಳಿಸಿದರು. +

ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಭಿನಂದನೆ:

ನೂತನವಾಗಿ ಅಸ್ತಿತ್ವಕ್ಕೆ ಬಂದ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರನ್ನು ಸ್ವಾಗತಿಸಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಭಿನಂಧನೆ ಸಲ್ಲಿಸಿದರು.

ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಅಧ್ಯಕ್ಷರಾಗಿ ಆರ್.ಶಿವಣ್ಣ, ಉಪಾಧ್ಯಕ್ಷರುಗಳಾಗಿ ಡಿ.ಎನ್.ಮೈಲಾರಪ್ಪ, ಖಾದಿ.ಜೆ.ರಮೇಶ್, ಟಿ.ನಿರಂಜನ್, ಜೆ.ಟಿ.ಬಾಬುರೆಡ್ಡಿ, ನಾಗೇಶ್ ರೆಡ್ಡಿ, ಸದಸ್ಯರುಗಳಾಗಿ ಕೆ.ಪಿ.ಸಂಪತ್‌ಕುಮಾರ್, ಬಿ.ಟಿ.ಜಗದೀಶ್, ಅಬ್ದುಲ್ಲಾ ಶಾ ವಲಿ, ಟಿ.ಕೃಷ್ಣಮೂರ್ತಿ, ನಾಗರಾಜ್, ಹೇಮಂತ್ ಯಾದವ್, ಮಹಮದ್ ಇಸ್ಮಾಯಿಲ್, ಎ.ಲೋಹಿತ್, ಕೆ.ಎ.ತಿಪ್ಪೇಶ್, ಎಲ್. ಇಂದಿರಾ, ಪಿ.ಆರ್.ಶಿವಕುಮಾರ್, ಮಧುಪಾಲೇಗೌಡ, ಟಿ.ಪ್ರಕಾಶ್, ಚನ್ನಕೇಶವ, ಜೆ.ಪಿ.ಸುರೇಶ್ ಕಾರ್ಯನಿರ್ವಹಿಸಲಿದ್ದಾರೆ.

ತಾಲ್ಲೂಕು ಮಟ್ಟದಲ್ಲಿಯೂ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯನ್ನು ರಚಿಸಲಾಗಿದೆ. ತಾ.ಪಂ.ಇಓ ಈ ಸಮಿತಿ ಸದಸ್ಯ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸಲಿದ್ದಾರೆ. ಜಿಲ್ಲಾ ಮಟ್ಟದ ಪ್ರಾಧಿಕಾರದಲ್ಲಿ ಚರ್ಚಿಸುವ ವಿಷಯಗಳ ಆಧಾರದಲ್ಲಿ ಗ್ಯಾರಂಟಿ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡುವುದಾಗಿ ಜಿಲ್ಲಾ ಮಟ್ಟದ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಯಾಗಿರುವ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸಭೆಯಲ್ಲಿ ತಿಳಿಸಿದರು.

# ಮತದಾನ ಕೇಂದ್ರ ಕರಡು ಪಟ್ಟಿ ಪ್ರಕಟ

» ಚಿತ್ರದುರ್ಗ

ಲೋಕಸಭಾ ಸಾರ್ವತ್ರಿಕ ಚುನಾವಣೆ-2024ರ ಸಂಬಂಧ ಚಿತ್ರದುರ್ಗ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಮ್ಮುಖದಲ್ಲಿ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರು ಜಿಲ್ಲೆಯ ಆರು ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಬರುವ ಮತದಾನ ಕೇಂದ್ರಗಳ ಕರಡು ಪಟ್ಟಿಯನ್ನು ಬಿಡುಗಡೆ ಮಾಡಿದರು.




ಜಿಲ್ಲೆಯಲ್ಲಿ ಒಟ್ಟು ಆರು ವಿಧಾನಸಭಾ ಕ್ಷೇತ್ರಗಳಿದ್ದು, ಮೊಳಕಾಲ್ಮುರು ವಿಧಾನಸಭಾ ಕ್ಷೇತ್ರದಲ್ಲಿ 285 ಮತಗಟ್ಟೆಗಳು, ಚಳ್ಳಕೆರೆ-260, ಚಿತ್ರದುರ್ಗ-288, ಹಿರಿಯೂರು-287, ಹೊಸದುರ್ಗ-242 ಹಾಗೂ ಹೊಳಲ್ಕೆರೆ ವಿಧಾನಸಭಾ ಕ್ಷೇತ್ರದಲ್ಲಿ 299 ಮತಗಟ್ಟೆಗಳು ಸೇರಿದಂತೆ ಜಿಲ್ಲೆಯ ಆರು ವಿಧಾನಸಭಾ ಕ್ಷೇತ್ರಗಳಿಂದ ಒಟ್ಟು 1661 ಮತಗಟ್ಟೆಗಳನ್ನು ಹೊಂದಿದೆ.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಜಿಲ್ಲಾ ವಾರ್ತಾಧಿಕಾರಿ ಬಿ.ವಿ.ತುಕಾರಾಂರಾವ್, ಚುನಾವಣಾ ತಹಶೀಲ್ದಾರ್ ಎಲ್. ಜಯಣ್ಣ, ಜಿಲ್ಲಾ ಜೆಡಿಎಸ್ ಮಹಾ ಪ್ರಧಾನ ಕಾರ್ಯದರ್ಶಿ ಡಿ.ಗೋಪಾಲಸ್ವಾಮಿನಾಯಕ,ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಡಿ.ಎನ್.ಮೈಲಾರಪ್ಪ, ಜಿಲ್ಲಾ ಬಿಜೆಪಿ ಕಾರ್ಯಕಾರಣಿ ಸಮಿತಿ ಸದಸ್ಯ ಯಶವಂತ್ ಕುಮಾರ್, ಸಿಪಿಐ ಡಿಇಓ ಗೌಸ್‌ಪೀರ್, ಬಿಎಸ್‌ಪಿ ಜಿಲ್ಲಾ ಅಧ್ಯಕ್ಷ ಎನ್.ಪ್ರಕಾಶ್ ಸೇರಿದಂತೆ ಮತ್ತಿತರರು ಇದ್ದರು.

### ಬಿಲ್ವ ಪತ್ರೆ ಮರಕ್ಕೆ ಶಿವಲಿಂಗಾನಂದ ಶ್ರೀ ಪೂಜೆ



» ಚಿತ್ರದುರ್ಗ

ನಗರದ ಕಬೀರಾನಂದಾಶ್ರಮದವತಿಯಿಂದ ಮಾ.4 ರಿಂದ 9ರವರೆಗೆ ನಡೆದ 94ನೇ ಶಿವರಾತ್ರಿ ಮಹೋತ್ಸವ ಕಾರ್ಯಕ್ರಮ ಅಂತಿಮ ಕಾರ್ಯಕ್ರಮವಾದ ಬಿಲ್ವ ಪತ್ರೆ ಮರಕ್ಕೆ ಶ್ರೀ ಶಿವಲಿಂಗಾನಂದ ಶ್ರೀಗಳು ಪೂಜೆಯನ್ನು ನಡೆಸುವುದರ ಮೂಲಕ 94ನೇ ಶಿವರಾತ್ರಿ ಮಹೋತ್ಸವವಕ್ಕೆ ಅಂತಿಮ ತೆರೆ ಎಳೆಯಲಾಯಿತು. ಕಬೀರಾನಂದಾಶ್ರಮದ ಆವರಣದಲ್ಲಿನ ಬಿಲ್ವ ಪತ್ರ ಮರಕ್ಕೆ ಪೂಜೆಯನ್ನು ನೆರವೇರಿಸಲಾಯಿತು. ಶ್ರೀ ಮಠದ ಶಿಷ್ಯರು ಹಾಡುಗಳನ್ನು ಹೇಳುವುದರ ಮೂಲಕ ಪೂಜೆಗೆ ಮೆರಗನ್ನು ನೀಡಲಾಯಿತು. ಪೂಜೆಯ ನಂತರ ಪ್ರಸಾದವನ್ನು ಇಡಲಾಯಿತು. ಇದೇ ಸಮಯದಲ್ಲಿ ಬಿಲ್ವ ಪತ್ರ ಮರಕ್ಕೆ ಕಟ್ಟಿದ ಧ್ವಜವನ್ನು ಇಳಿಸಿ ಅದಕ್ಕೆ ಪೂಜೆಯನ್ನು ಸಲ್ಲಿಸಿ ಮತ್ತೆ ಮರಕ್ಕೆ ಕಟ್ಟಲಾಯಿತು. ಈ ಸಂದರ್ಭದಲ್ಲಿ ಮಠದ ಗಣಪತಿ ಶಾಸ್ತ್ರಿ, ತಿಪ್ಪೇಸ್ವಾಮಿ, ನಿರಂಜನ, ಓಂಕಾರ್, ಮಂಜುನಾಥ್ ಗುಪ್ತ, ಗೋವರ್ದನ್ ಸೇರಿದಂತೆ ಇತರರು ಭಾಗವಹಿಸಿದ್ದರು.

## ಪ್ರಮುಖ ಸುದ್ದಿ

### ವಿಶ್ವಾಸ ತರಬೇತಿ ಕಾರ್ಯಾಗಾರದಲ್ಲಿ ಭರಮಸಾಗರ ಗ್ರಾ.ಪಂ ಅಧ್ಯಕ್ಷೆ

# ಸಮುದಾಯ ಆರೋಗ್ಯ ಕಾಪಾಡೋಣ: ರತ್ನಮ್ಮ ಜಯಪ್ಪ

» ಚಿತ್ರದುರ್ಗ

ಗ್ರಾಮ ಆರೋಗ್ಯ ನೈರ್ಮಲ್ಯ ಪೌಷ್ಟಿಕ ಸಮಿತಿ ಸದಸ್ಯರ ಸಹಭಾಗಿತ್ವದೊಂದಿಗೆ ಸಮುದಾಯ ಆರೋಗ್ಯ ಕಾಪಾಡೋಣ ಎಂದು ಭರಮಸಾಗರ ಗ್ರಾಮ ಪಂಚಾಯಿತಿ ಅಧ್ಯಕ್ಷೆ ರತ್ನಮ್ಮ ಜಯಪ್ಪ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಭರಮಸಾಗರ ಸಮುದಾಯ ಆರೋಗ್ಯ ಕೇಂದ್ರದ ಸಭಾಂಗಣದಲ್ಲಿ ಶುಕ್ರವಾರ ಕಾಲ್ಗೆರೆ ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯ 17 ಗ್ರಾಮ ಆರೋಗ್ಯ ನೈರ್ಮಲ್ಯ ಪೌಷ್ಟಿಕ ಸಮಿತಿಗಳ ಒಟ್ಟು 51 ಸದಸ್ಯರಿಗೆ ವಿಶ್ವಾಸ್ ತರಬೇತಿ ಕಾರ್ಯಾಗಾರ ಉಧ್ಘಾಟಿಸಿ ಅವರು ಮಾತನಾಡಿದರು.



ಗ್ರಾಮೀಣ ಆರೋಗ್ಯ ಸಮಸ್ಯೆಗಳನ್ನು ಪರಿಹರಿಸಲು ಗ್ರಾಮ ಆರೋಗ್ಯ ಸಮಿತಿಗಳು ತಮ್ಮ ತಮ್ಮ ಹಂತಗಳಲ್ಲಿ ಸಾಮಾಜಿಕ ಆರೋಗ್ಯ ಪಿಡುಗುಗಳಾದ ಬಾಲ್ಯ ವಿವಾಹ, ಮಕ್ಕಳ ಹಕ್ಕುಗಳ ರಕ್ಷಣೆ, ಗರ್ಭಿಣಿ ಬಾಣಂತಿ ಆರೈಕೆ, ಲಸಿಕಾ ಕಾರ್ಯ ಯಶಸ್ವಿಗೊಳಿಸಲು ಒಗ್ಗೂಡಿ ಕೆಲಸ ಮಾಡಬೇಕು ಈ ನಿಟ್ಟಿನಲ್ಲಿ ಗ್ರಾಮ ಆರೋಗ್ಯ ನೈರ್ಮಲ್ಯ ಪೌಷ್ಟಿಕ ಸಮಿತಿ ಸದಸ್ಯರ ಸಹಭಾಗಿತ್ವದೊಂದಿಗೆ ಸಮುದಾಯ ಆರೋಗ್ಯ ಕಾಪಾಡೋಣ ಎಂದರು.


ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ ಮಾತನಾಡಿ, ವಿಶ್ವಾಸ್ ಆಂದೋಲನದ ಕ್ರಿಯಾ ಯೋಜನೆ ಪ್ರತಿ ತಿಂಗಳು ಒಂದೊಂದು ಸಾರ್ವಜನಿಕ ಆರೋಗ್ಯ ಸಮಸ್ಯೆಗಳನ್ನು ಆಂದೋಲನದ ಮುಖಾಂತರ ಜನ ಜಾಗೃತಿ ಮಾಡಿಸಬೇಕು. ಬಾಲ್ಯವಿವಾಹ ನಿಯಂತ್ರಣ, ತಾಯಿ ಮರಣ, ಮಕ್ಕಳ ಮರಣ, ಶೌಚಾಲಯ ಬಳಕೆ, ಕೈ ತೊಳೆಯುವ ವಿಧಾನ, ಜೀವನ ಶೈಲಿ, ಘನ ತ್ಯಾಜ್ಯ ವಿಲೇವಾರಿ, ರಾಷ್ಟ್ರೀಯ ಬಾಲಸ್ವಾಸ್ಥ್ಯ ಕಾರ್ಯಕ್ರಮ, ರಾಷ್ಟ್ರೀಯ ಕಿಶೋರಿ ಸ್ವಾಸ್ಥ್ಯ ಕಾರ್ಯಕ್ರಮಗಳ ಬಗ್ಗೆ ಅರಿವು ಮೂಡಿಸಬೇಕು. ಮುಕ್ತನಿಧಿ ಬಳಕೆ, ಲೆಕ್ಕಪತ್ರ ನಿರ್ವಹಣೆ, ಮಾಸಿಕ ಸಭೆ ಹೇಗೆ ನಡೆಸಬೇಕು. ಜನರ ಆರೋಗ್ಯ ಕಾಪಾಡುವ ಆರೋಗ್ಯ ಸಮಸ್ಯೆಗಳನ್ನು ಸಮುದಾಯದಲ್ಲಿ ಬಗೆಹರಿಸುವ ಕಾರ್ಯದಲ್ಲಿ ಗ್ರಾಮ ಆರೋಗ್ಯ ನೈರ್ಮಲ್ಯ ಪೌಷ್ಟಿಕ ಸಮಿತಿಗಳ ಪಾತ್ರ ಪ್ರಮುಖವಾದದ್ದು ಎಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿ, ವಿಶ್ವಾಸ್ ಆಂದೋಲನದ ಪರಿಚಯ ಪ್ರತಿ ತಿಂಗಳು ಈ ನಿಟ್ಟಿನಲ್ಲಿ ವಾರ್ಷಿಕ ಕ್ರಿಯಾ ಯೋಜನೆ ಹೇಗೆ ತಯಾರಿಸಬೇಕು ಆರೋಗ್ಯ ಸಮಸ್ಯೆಗಳ ಪಟ್ಟಿ ಮಾಡಿ ಚರ್ಚಿಸಿ ಜನ ಜಾಗೃತಿಯನ್ನು ಪ್ರತಿ ತಿಂಗಳು ಒಂದೊಂದು ಆರೋಗ್ಯ ಮತ್ತು ಶುಚಿತ್ವ, ಜೀವನ ಶೈಲಿ ಬದಲಾವಣೆ ಇತರೆ ಸಾಮಾಜಿಕ ಪಿಡುಗುಗಳ ಬಗ್ಗೆ ಜಾಗೃತಿ ಮೂಡಿಸಬೇಕು ಎಂದರು.

ತರಬೇತಿ ಕಾರ್ಯಾಗಾರದಲ್ಲಿ ಗ್ರಾಮ ಆರೋಗ್ಯ ನೈರ್ಮಲ್ಯ ಪೌಷ್ಟಿಕ ಸಮಿತಿಯ ರುದ್ರೇಶ್, ರಾಜಪ್ಪ, ಲಕ್ಷ್ಮಿದೇವಿ ಭೀಮಾನಾಯ್ಕ್, ಪಾಲಣ್ಣ, ರುದ್ರೇಶ್ ಜಗದೀಶ್, ಡಾ.ಅಭಿಶೇಕ್, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ರಂಗಾ ರೆಡ್ಡಿ, ಆಂಜನೇಯ, ಸಂದೀಪ್, ಕೆಂಚಪ್ಪ, ಮಹಂತೇಶ್ ಸೇರಿದಂತೆ ಮತ್ತಿತರರು ಇದ್ದರು.

## ಫಾಸ್ಟ್ ನ್ಯೂಸ್

### ಜಾನಕಲ್ಲು ಶ್ರೀ ವೆಂಕಟೇಶ್ವರ ಸ್ವಾಮಿ ರಥೋತ್ಸವ"



» **ಹೊಸದುರ್ಗ**

ತಾಲ್ಲೂಕಿನ ಜಾನಕಲ್ಲು ಗ್ರಾಮದ ಶ್ರೀ ವೆಂಕಟೇಶ್ವರ ಸ್ವಾಮಿ ದೇವರ ಹಾಗೂ ಶ್ರೀ ತಿಮ್ಮಪ್ಪ ಸ್ವಾಮಿ ರಥೋತ್ಸವವು ಅತ್ಯಂತ ಸಡಗರ ಸಂಭ್ರಮಗಳಿಂದ ಶುಕ್ರವಾರ ಅದ್ದೂರಿಯಾಗಿ ಜರುಗಿತು.ಭವ್ಯವಾದ ದೇವಿ ರಥವನ್ನು ಮಂಗಳ ದ್ರವ್ಯಗಳಿಂದ ಹಾಗೂ ವರ್ಣರಂಜಿತ ಪುಷ್ಪ ಮತ್ತು ರಂಗುರಂಗಿನ ವಸ್ತ್ರಗಳಿಂದ ಶೃಂಗರಿಸಿ ಕಳಸ ಸ್ಥಾಪನೆ ಮಾಡಲಾಗಿತ್ತು.ರಥದ ಸುತ್ತ ಹಸಿರು ತಳಿರು ತೋರಣಗಳಿಂದ ಚಿತ್ತಾಕರ್ಷಕವಾಗಿ ಆಲಂಕರಿಸಲಾಗಿತ್ತು.ರಥೋತ್ಸವದ ಅಂಗವಾಗಿ ಇಡೀ ಗ್ರಾಮದಲ್ಲೆ ವೈವಿಧ್ಯಮಯ ವಿದ್ಯುತ್ ದೀಪಾಲಂಕಾರದಿಂದ ಕಂಗೊಳಿಸುತ್ತಿತ್ತು,ಜಾನಪದ ವಾದ್ಯಗಳನೀನಾದದೊಂದಿಗೆಶ್ರೀವೆಂಕಟೇಶ್ವರಸ್ವಾಮಿ ಹಾಗೂ ಶ್ರೀ ತಿಮ್ಮಪ್ಪ ದೇವರು ರಥಾರೋಹಣ ಮಾಡಿದರು.ಈ ದೃಶ್ಯವನ್ನ ನೋಡಲು ನೆರದಿದ್ದ ಭಕ್ತರು ನೂಕು ನೂಕಲಿನಲ್ಲೆ ಮುಗೆಬೀಳುತ್ತಿದ್ದರು ಜಾತ್ರೆಯ ಮುಖ್ಯ ಆಕರ್ಷಣೀಯ ಕೇಂದ್ರ ಬಿಂದು ಶ್ರೀ ಸೋಮದೇವರ ಸಂಬ್ರಮದ ಕುಣಿತ ಜರ ಗಿತು,ಊರುಮೆ,ದೋಣು,ಹಲಗೆ,ಓಲಗ,ಕಹಳೆಯ ಬಡಿತಕ್ಕೆ ಶ್ರೀ ಸೋಮನ ಲಯಬದ್ದ ಕುಣಿತ ಜನಮನ ಸೂರೆಗೊಂಡಿತು.ಅಪಾರ ಸಂಖ್ಯೆಯಲ್ಲಿ ಕಿಕ್ಕಿರಿದು ಸೇರಿದ್ದ ಜನಸ್ತೋಮ ರಥ ಎಳೆದ ನಂತರ ಆಭರಣಾಲಂಕೃತ ದೇವರ ಪಲ್ಲಕ್ಕಿ ಉತ್ಸವ ಗ್ರಾಮದ ರಾಜಬೀದಿಗಳಲ್ಲಿ ಮೆರವಣಿಗೆ ಜರುಗಿತು.ಉತ್ಸವದುದ್ದಕ್ಕೂ ಶ್ರೀ ಸೋಮನ ಕುಣಿತ ಮುಂದುವರೆದಿತ್ತು, ತೇರು ಹರಿಯುವಾಗ ಸುತ್ತಮುತ್ತಲಿನ ಹಳ್ಳಿಯ ಭಕ್ತರಿಂದ ಬಾಳೇಹಣ್ಣು ತೂರಾಟ ಹಾಗೂ ಸೋಮನ ಮೇಲೆ ಮಂಟಕ್ಕಿ ತೂರಾಟ ಅತಿ ರಂಜನೀಯವಾಗಿತ್ತು,ದಿನಾಂಕ 16 ರಂದು ಶನಿವಾರ ಬೆಳಿಗ್ಗೆ ಶ್ರೀ ಸ್ವಾಮಿಯವರ ಕೆಂಡೋತ್ಸವ ನಡೆಯಲಿದೆ.

### ಇಂದು ಉಚಿತ ನೇತ್ರ ತಪಾಸಣಾ ಶಿಬಿರ

» **ಹೊಸದುರ್ಗ**

ಶಂಕರ ಕಣ್ಣಿನ ಆಸ್ಪತ್ರೆ ಶಿವಮೊಗ್ಗ,ಶ್ರೀ ಶಿರಡಿ ಸಾಯಿಬಾಬಾ ಟ್ರಸ್ಟ್,ಶ್ರೀ ಗಣೇಶ ಸದನ ಟ್ರಸ್ಟ್ ಹಾಗು ಮತ್ತಿತರೆ ಸಂಘ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಮಾರ್ಚ್ 16 ರಂದು ಶನಿವಾರ ಬೆಳಿಗ್ಗೆ 9 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಪಟ್ಟಣದ ಹುಳಿಯಾರು ರಸ್ತೆಯಲ್ಲಿರುವ ಶ್ರೀ ಶಿರಡಿ ಸಾಯಿಬಾಬಾ ಮಂದಿರದಲ್ಲಿ ಉಚಿತ ನೇತ್ರ ತಪಾಸಣಾ ಮತ್ತು ಚಿಕಿತ್ಸಾ ಶಿಬಿರವನ್ನ ಆಯೋಜಿಸಲಾಗಿದೆ ಎಂದು ಶ್ರೀ ಶಿರಡಿ ಸಾಯಿಬಾಬಾ ಟ್ರಸ್ಟ್ ಅಧ್ಯಕ್ಷ ಹಂಜಿಶಿವಸ್ವಾಮಿ ತಿಳಿಸಿದ್ದಾರೆ.

ಶಿಬಿರದಲ್ಲಿ ಮುಖ್ಯವಾಗಿ ಮಕ್ಕಳಿಗೂ ಕೂಡ ಕಣ್ಣಿನ ತೊಂದರೆ ಇದ್ದಲ್ಲಿ ಆರಂಭದಲ್ಲೆ ಕಂಡು ಅದಕ್ಕೆ ತಕ್ಕಂತೆ ತಜ್ಞರ ಸಲಹೆ ಮತ್ತು ಚಿಕಿತ್ಸೆ ಬೇಕಾಗಿದ್ದಲ್ಲಿ ಉಚಿತವಾಗಿ ಮಾಡಲಾಗುವುದು ಎಂದರು. ಹೆಚ್ಚಿನ ಮಾಹಿತಿಗೆ 9008733470-9901706731 ಸಂಪರ್ಕಿಸಬಹುದು.

### ಮೀನುಗಾರಿಕೆ ಸಲಕರಣೆ ಕಿಟ್: ಅರ್ಜಿ ಆಹ್ವಾನ

» **ಚಿತ್ರದುರ್ಗ**

ಚಿತ್ರದುರ್ಗ ತಾಲ್ಲೂಕಿಗೆ ಸಂಬಂಧಿಸಿದಂತೆ ಗಣಿಬಾಧಿತ ಜಿಲ್ಲೆಗಳ ಸಮಗ್ರ ಅಭಿವೃದ್ಧಿ ಯೋಜನೆಯಡಿ (ಅಇಕಒಖಚ) 2023-24 ನೇ ಸಾಲಿಗೆ ಸಂಬಂಧಿಸಿದಂತೆ ಮೀನುಗಾರಿಕೆ ಇಲಾಖೆ ವತಿಯಿಂದ ಅರ್ಹ ಫಲಾನುಭವಿಗಳಿಗೆ ಶೇ.100ರಷ್ಟು ಸಹಾಯಧನದಲ್ಲಿ ಮೀನುಗಾರಿಕೆ ಸಲಕರಣೆ ಯೋಜನೆಯಡಿ ಆಸಕ್ತ ಮೀನುಗಾರ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಏಪ್ರಿಲ್ 20 ಕೊನೆ ದಿನವಾಗಿದೆ.

ಈ ಯೋಜನೆಗೆ ಚಿತ್ರದುರ್ಗ ತಾಲ್ಲೂಕಿನ ಭೀಮಸಮುದ್ರ, ವಿ.ಪಾಳ್ಯ, ಮೇಗಳಹಳ್ಳಿ, ಮಾರಿಜೋಗಿಹಳ್ಳಿ, ಕಡ್ಲೆಗುದ್ದು, ಬೋಮವ್ವನಾಗ್ತಿಹಳ್ಳಿ, ತುರೆಬೈಲು, ಮಳಲಿ, ನೆಲ್ಲಿಕಟ್ಟೆ, ಹಿರೇಗುಂಟನೂರು, ಹಳಿಯೂರು, ಬೆಟ್ಟದನಾಗೇನಹಳ್ಳಿ, ಬಸವಪುರ, ಅಮೃತಪುರ, ದಿಂಡನಹಳ್ಳಿ, ಬೊಮ್ಮೆನಹಳ್ಳಿ, ಸಿದ್ದಾಪುರ, ಮಾನಂಗಿ, ಮಾಳಪ್ಪನಹಟ್ಟಿ, ಕೋಣನೂರು, ಚಿಕ್ಕೆನಹಳ್ಳಿ, ಡಿ.ಮದಕರಿಪುರ, ಆಲಘಟ್ಟ, ಸಿರಿಗೆರೆ, ಓಬವ್ವನಾಗ್ತಿಹಳ್ಳಿ, ಸಿದ್ದವ್ವನಹಳ್ಳಿ, ದೊಡ್ಡಿಗನಾಳ್, ಡಿ.ಹೊಸಹಟ್ಟಿ ಗ್ರಾಮಗಳ ಸಾರ್ವಜನಿಕರು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.

### ಬೋರ್‌ವೆಲ್ ಕೊರೆಯುವ ಏಜೆನ್ಸಿಗಳು, ರೈತರ ಸಭೆಯಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ


# ಬೋರ್‌ವೆಲ್ ಕೊರೆಯಲು ಏಕರೂಪ ದರ ನಿಗದಿ

» **ಚಿತ್ರದುರ್ಗ**

ರೈತರಿಗೆ ಹೊರೆಯಾಗದಂತೆ ಹಾಗೂ ಬೋರ್‌ವೆಲ್ ಕೊರೆಯುವ ಮಾಲೀಕರಿಗೆ ಹಾಗೂ ಏಜೆನ್ಸಿಗಳಿಗೂ ನಷ್ಟವಾಗದಂತೆ ಬೋರ್‌ವೆಲ್ ಕೊರೆಯಲು ಏಕರೂಪ ದರನಿಗದಿಗೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಅಂತರ್ಜಲ ಕುಸಿತದಿಂದಾಗಿ ಬೋರ್‌ವೆಲ್‌ಗಳು ಬರಿದಾಗುತ್ತಿದ್ದು, ಬೋರ್‌ವೆಲ್ ಕೊರೆಯಲು ಅತ್ಯಂತ ದುಬಾರಿ ಶುಲ್ಕವನ್ನು ವಸೂಲಿ ಮಾಡಿ ರೈತರ ಶೋಷಣೆ ಮಾಡುತ್ತಿದ್ದು, ಈ ಕುರಿತು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಬೋರ್‌ವೆಲ್ ಕೊರೆಯುವ ಏಜೆನ್ಸಿಗಳು ಹಾಗೂ ರೈತರೊಂದಿಗೆ ನಡೆಸಿದ ಸಭೆಯಲ್ಲಿ ಅವರು ಮಾತನಾಡಿದರು.

ಬೋರ್‌ವೆಲ್ ಕೊರೆಯಲು ಏಕರೂಪ ದರನಿಗದಿಗೆ ತಾಲ್ಲೂಕುವಾರು ಆಯಾ ತಹಶೀಲ್ದಾರ್ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು, ರೈತ ಸಂಘಟನೆಗಳ ಮುಖಂಡರು, ಬೋರ್‌ವೆಲ್ ಏಜೆನ್ಸಿಗಳನ್ನು ಒಳಗೊಂಡಂತೆ ಒಂದು ಸಮಿತಿಯನ್ನು ರಚನೆ ಮಾಡಿ, ಏಕರೂಪ ದರ ನಿಗದಿಪಡಿಸಬೇಕು ಎಂದು ಸೂಚನೆ ನೀಡಿದ ಅವರು, ಚಿತ್ರದುರ್ಗ ಜಿಲ್ಲೆಯಲ್ಲಿ ಬರಗಾಲದ ತೀವ್ರತೆ ಹೆಚ್ಚಾಗಿದೆ. ರೈತರಿಗೆ ಹೆಚ್ಚಿನ ದರ ವಿಧಿಸದೆ ಬೋರ್‌ವೆಲ್ ಮಾಲೀಕರು ಕಾಳಜಿ ವಹಿಸಿ ಏಕರೂಪದ ದರದಲ್ಲಿ ರೈತರಿಗೆ ಬೋರ್‌ವೆಲ್ ಕೊರೆಯುವಂತೆ ತಾಕೀತು ಮಾಡಿದರು.



ವಿಫಲವಾದ ಬೋರ್‌ವೆಲ್‌ಗಳನ್ನು ಸಂಬಂಧಪಟ್ಟ ಬೋರ್‌ವೆಲ್ ಏಜೆನ್ಸಿಗಳು ತಕ್ಷಣವೇ ಮುಚ್ಚಲು ಕ್ರಮ ವಹಿಸಬೇಕು. ವಿಫಲವಾದ ಬೋರ್‌ವೆಲ್ ಕೇಸಿಂಗ್ ಪೈಪ್‌ಗೆ ಯಾವುದೇ ಕಾರಣಕ್ಕೂ ಚಾರ್ಜ್ ತೆಗೆದುಕೊಳ್ಳಬಾರದು. ಕಡ್ಡಾಯವಾಗಿ ಬಿಲ್ ನೀಡಬೇಕು. ಇಲ್ಲದಿದ್ದರೆ ಶಿಸ್ತುಕ್ರಮ ಕೈಗೊಳ್ಳಲಾಗುವುದು. ಜಿಲ್ಲೆಯ ರೈತರಿಗೆ ಯಾವುದೇ ರೀತಿಯ ತೊಂದರೆಯಾಗಬಾರದು ಎಂದು ಸೂಚನೆ ನೀಡಿದರು.

ರೈತ ಮುಖಂಡ ಈಚಘಟ್ಟ ಸಿದ್ಧವೀರಪ್ಪ ಮಾತನಾಡಿ, ಕಳೆದ ಒಂದು ತಿಂಗಳ ಹಿಂದೆ ಬೋರ್‌ವೆಲ್ ಕೊರೆಯಲು ಒಂದು ಅಡಿಗೆ ರೂ.90 ಇತ್ತು. ಆದರೆ ಇದೀಗ ರೂ.120 ರಿಂದ 130ಕ್ಕೆ ದರ ಏರಿಕೆಯಾಗಿದೆ. ಯಾವ ಆಧಾರದ ಮೇಲೆ ದರ ಏರಿಕೆ ಮಾಡಲಾಗಿದೆ ಎಂದು ಪ್ರಶ್ನಿಸಿದ ಅವರು, ರೈತರು ಅಸಂಘಟಿತರಾಗಿರುವುದರಿಂದ ಪ್ರಶ್ನೆ ಮಾಡಲು ಸಾಧ್ಯವಾಗುತ್ತಿಲ್ಲ. ಬೋರ್‌ವೆಲ್ ಏಜೆನ್ಸಿಗಳಿಂದ ರೈತರಿಗೆ ಶೋಷಣೆಯಾಗುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಬರಗಾಲದ ಪರಿಸ್ಥಿತಿಯಲ್ಲಿ ರೈತರಿಗೆ ಮಾನವೀಯತೆಯಿಂದ ಕಾಳಜಿ ವಹಿಸಿ, ರಿಯಾಯಿತಿ ದರದಲ್ಲಿ ರೈತರಿಗೆ ಶೋಷಣೆಯಾಗದಂತೆ, ಬೋರ್‌ವೆಲ್ ಕೊರೆಯಬೇಕು ಎಂದು ಮನವಿ ಮಾಡಿದರು.

ರೈತಮುಖಂಡ ರೆಡ್ಡಿಹಳ್ಳಿ ವೀರಣ್ಣ ಮಾತನಾಡಿ, ದೇಶದ 140 ಕೋಟಿ ಜನಸಂಖ್ಯೆಗೆ ರೈತರು ಕೃಷಿ ಮಾಡಿ ಆಹಾರ ಭದ್ರತೆ ಕಾಪಾಡಿಕೊಂಡು ಬಂದಿದ್ದಾರೆ. ಬೋರ್‌ವೆಲ್ ವಿಚಾರದಲ್ಲಿ ರೈತರಿಗೆ ಸಾಕಷ್ಟು ಶೋಷಣೆಯಾಗುತ್ತಿದ್ದು, ಇದಕ್ಕೆ ಸರಿಯಾದ ಮಾನದಂಡ ರೂಪಿಸುವ ಅಗತ್ಯವಿದೆ ಎಂದು ಹೇಳಿದರು.

ಬೋರ್‌ವೆಲ್ ಕೊರೆಯುವ ವಾಹನಗಳ ಮಾಲೀಕರು, ಏಜೆನ್ಸಿಗಳ ಪ್ರತಿನಿಧಿಗಳು ಮಾತನಾಡಿ, ಬೋರ್‌ವೆಲ್ ಕೊರೆಯಲು ಕಾರ್ಮಿಕರ ಸಮಸ್ಯೆ ತೀವ್ರವಾಗಿದೆ. ಛತ್ತಿಸ್‌ಘಡದಿಂದ ಕಾರ್ಮಿಕರನ್ನು ಕರೆದುಕೊಂಡು ಬರಲಾಗುತ್ತಿದೆ. ಉಪಕರಣಗಳ ವೆಚ್ಚವೂ ಹೆಚ್ಚಾಗಿದೆ. ನಾವು ಕೂಡ ರೈತರ ಪರವಾಗಿದ್ದೇವೆ. ಕಾರ್ಮಿಕರ ಕೊರತೆಯಿಂದ ಶೇ.25ರಷ್ಟು ಬೋರ್‌ವೆಲ್ ಕೊರೆಯುವ ವಾಹನಗಳು ಸ್ಥಗಿತಗೊಂಡಿವೆ ಎಂದು ಹೇಳಿದರು.ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ್, ಪ್ರಾದೇಶಿಕ ಸಾರಿಗೆ ಅಧಿಕಾರಿ ಭರತ್ ಎಂ.ಕಾಳೇಸಿಂಘೆ ಸೇರಿದಂತೆ ಜಿಲ್ಲೆಯ ರೈತ ಮುಖಂಡರು, ಬೋರ್‌ವೆಲ್ ಕೊರೆಯುವ ವಾಹನಗಳ ಮಾಲೀಕರು ಇದ್ದರು.

### ವಾರದೊಳಗೆ ಬೆಳೆ ವಿಮೆ ಪಾವತಿ

ಈಗಾಗಲೇ ಬೆಳೆವಿಮೆ ಕಂಪನಿಯೊಂದಿಗೆ ಚರ್ಚೆ ನಡೆಸಲಾಗಿದ್ದು, ವಾರದೊಳಗೆ ಜಿಲ್ಲೆಯ ರೈತರಿಗೆ ಬೆಳೆವಿಮೆ ಪಾವತಿಗೆ ಕ್ರಮವಹಿಸಲಾಗುವುದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ರೈತರಿಗೆ ಭರವಸೆ ನೀಡಿದರು. ತಾಂತ್ರಿಕ ಕಾರಣಗಳಿಂದಾಗಿ ಬೆಳೆವಿಮೆ ಪಾವತಿ ವಿಳಂಬವಾಗಿದ್ದು, ವಾರದೊಳಗೆ ಬೆಳೆವಿಮೆ ಪಾವತಿ ಮಾಡುವಂತೆ ಬೆಳೆ ಕಂಪನಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಒಂದು ವೇಳೆ ಬೆಳೆವಿಮೆ ಪಾವತಿಯಾಗದಿದ್ದರೆ ಎಫ್‌ಐಆರ್ ದಾಖಲಿಸಲಾಗುವುದು ಎಂಬ ಎಚ್ಚರಿಕೆಯನ್ನೂ ನೀಡಲಾಗಿದೆ ಎಂದು ಹೇಳಿದರು. ರೈತಮುಖಂಡ ಭೂತಯ್ಯ ಮಾತನಾಡಿ, ಬರಗಾಲ ಹಾಗೂ ಬೆಳೆ ಇಲ್ಲದೇ ರೈತರು ಕಂಗಲಾಗಿದ್ದಾರೆ. ಬೆಳೆವಿಮೆ ಪಾವತಿಗೂ ನಿರ್ಧಿಷ್ಟ ದಿನಾಂಕ ನಿಗಧಿಪಡಿಸಬೇಕು ಎಂದು ಮನವಿ ಮಾಡಿದ ಅವರು, ಕೃಷಿ ಮತ್ತು ಕಂದಾಯ ಇಲಾಖೆಯ ಬೆಳೆ ಸಮೀಕ್ಷೆಯ ವರದಿಯನ್ನೇ ಆಧಾರಿಸಿ ಪರಿಹಾರ ನೀಡಬೇಕು. ಫಸಲ್‌ಭಿಮಾ ಯೋಜನೆಯ ಲೋಪದೋಷ ಸರಿಪಡಿಸಬೇಕು ಎಂದು ಹೇಳಿದರು.

# ಸೌಮ್ಯ ಪುತ್ರನ್ ವಿಷ ವರ್ತುಲ ಕೃತಿ ಬಿಡುಗಡೆ

» **ಚಿತ್ರದುರ್ಗ**

ಇತ್ತೀಚಿನ ದಿನಗಳಲ್ಲಿ ಸ್ತ್ರೀಯರೆ ಹೆಚ್ಚು ಮನೋರೋಗಕ್ಕೆ ತುತ್ತಾಗುತ್ತಿರುವುದಕ್ಕೆ ಅವರ ಮೇಲೆ ನಡೆಯುತ್ತಿರುವ ಶೋಷಣೆ ಕಾರಣ ಎಂದು ಬರಹಗಾರ್ತಿ ಸೌಮ್ಯ ಪುತ್ರನ್ ವಿಷಾಧಿಸಿದರು.

ನಗರದ ಎಸ್.ಜೆ.ಎಂ. ದಂತ ಮಹಾವಿದ್ಯಾಲಯ ಮತ್ತು ಆಸ್ಪತ್ರೆಯ ಶಿಮುಶ ಸಭಾಂಗಣದಲ್ಲಿ ಶುಕ್ರವಾರ ನಡೆದ ಮಹಿಳಾ ದಿನಾಚರಣೆ ಉದ್ಘಾಟಿಸಿ ಮಾತನಾಡಿದರು.

ಮನುಸ್ಮೃತಿಯಲ್ಲಿ ಸ್ತೀಯರ ಹಿರಿಮೆ ಬಗ್ಗೆ ಉಲ್ಲೇಖಿಸಲಾಗಿದೆ.ಇಂದಿನಕಾಲಘಟ್ಟದಲ್ಲಿಹೆಣ್ಣು ಅನೇಕ ಸವಾಲುಗಳನ್ನು ಎದುರಿಸಬೇಕಾಗಿದೆ. ವೇಶ್ಯಾವಾಟಿಕೆ, ಅಪಹರಣ, ಆಸಿಡ್ ದಾಳಿ, ಅತ್ಯಾಚಾರ ಹೀಗೆ ಹತ್ತು ಹಲವಾರು ಸಾಮಾಜಿಕ ಪಿಡುಗುಗಳಿಗೆ ಹೆಣ್ಣು ಬಲಿಯಾಗುತ್ತಿದ್ದಾಳೆ. ನಗರದಲ್ಲಿನ ವಿದ್ಯಾವಂತ ಮಹಿಳೆಯಾಗಲಿ ಅಥವಾ ಗ್ರಾಮೀಣ ಭಾಗದಲ್ಲಿರುವ ಮಹಿಳೆಯರಾಗಲಿ ಒಂದಲ್ಲ ಒಂದು ರೀತಿಯ ದೌರ್ಜನ್ಯಕ್ಕೆ ಒಳಗಾಗುತ್ತಿರುವುದು ನೋವಿನ ಸಂಗತಿ. ಮಹಿಳೆಯರ ಸಬಲೀಕರಣ ಕೇವಲ ಭಾಷಣಗಳಿಂದ ಆಗುವುದಿಲ್ಲ ಎಂದು ಹೇಳಿದರು.

ವಿಮರ್ಶಕಿ ತಾರಿಣಿ ಶುಭದಾಯಿನಿ ಮಾತನಾಡಿ ರಾಜಕೀಯವಾಗಿ ಹೆಣ್ಣು ಮಕ್ಕಳಿಗೆ ವಿಶೇಷವಾದ ಸೌಲಭ್ಯಗಳನ್ನು ನೀಡುವ ಮೂಲಕ ಮಹಿಳೆಯನ್ನು ಓಟ್ ಬ್ಯಾಂಕನ್ನಾಗಿ ಮಾಡಿಕೊಳ್ಳುತ್ತಿರುವುದು ನಿಜವಾಗಿಯೂ ಮಹಿಳಾ ಸಬಲೀಕರಣಕ್ಕೆ ಪೂರಕವಾಗಿದೆಯೇ ಎನ್ನುವುದು ಯಕ್ಷ ಪ್ರಶ್ನೆಯಾಗಿರುವುದರಿಂದ ಮಹಿಳೆಯರು ಆತ್ಮಾವಲೋಕನ ಮಾಡಿಕೊಳ್ಳುವ ಅಗತ್ಯವಿದೆ ಎಂದು ತಿಳಿಸಿದರು.



ಮಹಿಳಾ ದಿನಾಚರಣೆಯ ಅಧ್ಯಕ್ಷತೆ ವಹಿಸಿದ್ದ ಎಸ್.ಜೆ.ಎಂ. ದಂತ ಕಾಲೇಜು ಮತ್ತು ಆಸ್ಪತ್ರೆಯ ಪ್ರಾಚಾರ್ಯರಾದ ಡಾ.ಆರ್.ಗೌರಮ್ಮ ಮಾತನಾಡಿ ಲಿಂಗ ತಾರತಮ್ಯ, ಸಬಲೀಕರಣ, ಸಮಾನತೆ ಬಗ್ಗೆ ಎಲ್ಲರೂ ಮಾತನಾಡುತ್ತಾರೆ. ಆದರೆ ಮಹಿಳೆಗೆ ಮಹಿಳೆಯೆ ನಿಜವಾದ ಶತ್ರು, ರಾಣಿ ಅಬ್ಬಕ್ಕ, ಕಿತ್ತೂರು ರಾಣಿ ಚೆನ್ನಮ್ಮ, ಕೆಚ್ಚೆದೆಯ ವೀರವನಿತೆ ಒನಕೆ ಓಬವ್ವ ಇವರುಗಳೆಲ್ಲಾ ದೇಶ ರಕ್ಷಣೆಯಲ್ಲಿ ತೊಡಗಿದವರು. ಆಟೋ ಡ್ರೈವರ್‌ನಿಂದ ಹಿಡಿದು ಪೈಲೆಟ್‌ವರಗೆ ಮಹಿಳೆಯರಿದ್ದಾರೆ. ಎಲ್ಲಾ ರಂಗಗಳಲ್ಲಿಯೂ ಹೆಣ್ಣಿನ ಸಾಧನೆಯಿದೆ. ಜಾತಿ ನಿಂದನೆ ಕೇಸಿಗೆ ಕೆಲವು ಮಹಿಳೆಯರೆ ಪ್ರಚೋಧಿಸುತ್ತಿರುವ ಪ್ರಕರಣಗಳು ಸಾಕಷ್ಟಿವೆ. ಕೆಲವೊಮ್ಮೆ ಮಹಿಳೆ ಮೇಲೆ ಭ್ರಷ್ಟಾಚಾರದ ಆರೋಪವೂ ಕೇಳಿ ಬರುತ್ತದೆ. ಎಲ್ಲವನ್ನು ಸಹಿಸಿಕೊಳ್ಳುವ ಶಕ್ತಿ ಮಹಿಳೆಗಿದೆ ಎಂದು ಗುಣಗಾನ ಮಾಡಿದರು.

ಡಾ.ಸುನೀಲ್ ವಡವಡಗಿ, ಡಾ.ಗಜಲ ಯಾಸ್ಮಿನ್, ಡಾ.ಪ್ರಣೀತ, ದಯಾ ಪುತ್ತೂರ್ಕರ್ ವೇದಿಕೆಯಲ್ಲಿದ್ದರು.

ಇದೆ ಸಂದರ್ಭದಲ್ಲಿ ಬರಹಗಾರ್ತಿ ಸೌಮ್ಯ ಪುತ್ರನ್‌ರವರ ವಿಷ ವರ್ತುಲ ಕೃತಿ ಬಿಡುಗಡೆಗೊಳಿಸಲಾಯಿತು.

### ನಾಟಕ ಪ್ರದರ್ಶನ ಮಾಡುವ ಕಲಾವಿದರಿಗೆ ಬಹಳಷ್ಟು ತೊಂದರೆಗಳು ಎದುರಾಗುತ್ತವೆ.



» **ಹೊಸದುರ್ಗ**

ನಾಟಕ ಪ್ರದರ್ಶನ ಮಾಡುವ ಕಲಾವಿದರಿಗೆ ಬಹಳಷ್ಟು ತೊಂದರೆಗಳು ಎದುರಾಗುತ್ತವೆ. ಆದರೆ, ಅವುಗಳನ್ನು ಎದುರಿಸಿ ಪ್ರೇಕ್ಷಕರ ಎದುರಿಗೆ ನಟನೆ ಮಾಡುತ್ತಾರೆ. ಒಂದೊಂದು ನಾಟಕವು ಒಂದು ಸಂದೇಶವನ್ನು ನೀಡುತ್ತವೆ ಎಂದು ಸಾಣೇಹಳ್ಳಿ ಮಠದ ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ತಿಳಿಸಿದರು.ಪಟ್ಟಣದ ಸಿದ್ಧರಾಮೇಶ್ವರ ಸಮುದಾಯ ಭವನದಲ್ಲಿ 3 ದಿನಗಳಿಂದ ಶಿವಸಂಚಾರ ಕಲಾವಿದರಿಂದ ನಡೆದ ನಾಟಕಗಳ ಪ್ರದರ್ಶನ ಸಮಾರೋಪ ಸಮಾರಂಭದ ಸಾನಿಧ್ಯವಹಿಸಿ ಅವರು ಮಾತನಾಡಿದರು.ಮನುಷ್ಯನ ಬದುಕಿನಲ್ಲಿ ಜಾತಿ ವ್ಯವಸ್ಥೆ ಅತ್ಯಂತ ಅಪಾಯವಾಗಿದ್ದು, ಮನುಷ್ಯ ಮನುಷ್ಯರ ನಡುವೆ ಸಂಘರ್ಷ ತಂದಿಡುತ್ತದೆ. ಜಾತಿ ವ್ಯವಸ್ಥೆ ನಿರ್ಮೂಲನೆ ಮತ್ತು ಮೌಡ್ಯತೆ ದೂರಗೊಳಿಸಿ, ಸಂಸ್ಕಾರಗೊಳಿಸಿ ಜಾಗೃತಗೊಳಿಸುವಂತಹ ಕೆಲಸವನ್ನು ನಾಟಕಗಳು ಮಾಡುತ್ತವೆ. ಇವು ಮನರಂಜನೆಯ ಜೊತೆಗೆ ಮನವಿಕಾಸಗೊಳಿಸುತ್ತದೆ ಎಂ ಶ್ರೀಗಳು ಕಲ್ಯಾಣದ ಬಾಗಿಲು ಎಂಬ ನಾಟಕವೂ ವ್ಯಕ್ತಿಯೊಬ್ಬನು ಹೇಗೆ ತನ್ನನ್ನು ತಾನು ಜಾಗೃತ ಗೊಳಿಸಿಕೊಳ್ಳಬಹುದು ಎಂಬುದನ್ನು ಹೇಳುತ್ತದೆ. ಜೊತೆಗಿರುವನು ಚಂದಿರ ಎಂಬ ನಾಟಕ ಒಂದು ಕುಟುಂಬದ ನೋವು, ಸಂಕಟ, ದುಃಖ ಪರಿಸ್ಥಿತಿಯನ್ನು ಹೇಳಿದರೆ, ತಾಳಿಯ ತಕರಾರು ಎಂಬ ನಾಟಕ ಹಾಸ್ಯವಾಗಿದೆ. ಹೀಗೆ ಒಂದೊಂದು ಸಂದೇಶ ನಾಟಕಗಳಲ್ಲಿ ಅಡಗಿರುತ್ತದೆ ಎಂದರು. ಈ ಸಂಧರ್ಬದಲ್ಲಿ ಹೈಕೋರ್ಟ್ ನಿವೃತ್ತ ನ್ಯಾಯಾಧೀಶ ಹೆಚ್.ಬಿಲ್ಲಪ್ಪ, ಚನ್ನಗಿರಿ ಕ್ಷೇತ್ರ ಶಿಕ್ಷಣಾಧಿಕಾರಿ ಜಯಪ್ಪ, ತಾಲೂಕು ಕ.ಸಾ.ಪ ಅಧ್ಯಕ್ಷ ಓಂಕಾರಪ್ಪ, ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕು ಘಟಕದ ಮಾಜಿ ಅಧ್ಯಕ್ಷ ಆರ್.ಲಕ್ಕಯ್ಯ, ಹಾಲಿ ಅಧ್ಯಕ್ಷ ಗಂಗಾಧರ್ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವಿಸ್ತರಣಾಧಿಕಾರಿ ಶಶಿಧರ್ ಭಾಗವಹಿಸಿದ್ದರು.

### ಆಶಾಕಿರಣ ಯೋಜನೆಗೆ ಸಚಿವ ದಿನೇಶ್ ಚಾಲನೆ

**ಬೆಂಗಳೂರು:** ಮನೆ ಬಾಗಿಲಿಗೆ ನೇತ್ರ ತಪಾಸಣೆ ಸೇವೆ ತಲುಪಿಸುವ ಹಾಗೂ ಸಾರ್ವಜನಿಕರಿಗೆ ಉಚಿತ ಕನ್ನಡಕವನ್ನು ವಿತರಣೆ ಮಾಡುವ ಸಲುವಾಗಿ ಜಾರಿಗೆ ತಂದಿರುವ 'ಆಶಾಕಿರಣ' ಯೋಜನೆಗೆ ಆರೋಗ್ಯ ಸಚಿವರಾದ ದಿನೇಶ್ ಗುಂಡೂರಾವ್ ಚಾಲನೆ ನೀಡಿದ್ದಾರೆ.ಆರೋಗ್ಯ ಇಲಾಖೆಯು ಹೊಸ ಡಿಜಿಟಲ್ ಆರೋಗ್ಯ ತಂತ್ರಜ್ಞಾನಗಳನ್ನು ಬಳಸಿಕೊಂಡು ಸಮಗ್ರ ಕಣ್ಣಿನ ಆರೈಕೆ ಕಾರ್ಯಕ್ರಮವನ್ನು ಕಾರ್ಯಗತಗೊಳಿಸಲು ಸಿ-ಕ್ಯಾಂಪ್ ಮತ್ತು ಆಕ್ಟ್ ಫಾರ್ ಹೆಲ್ತ್ ನೊಂದಿಗೆ ಇಲಾಖೆ ಜತೆಯಾಗಿದೆ.ಈ ಯೋಜನೆಯನ್ನು ರಾಜ್ಯ ಸಾರಿಗೆ ಇಲಾಖೆಯ ಎಲ್ಲ ಸಿಬ್ಬಂದಿಗೂ ವಿಸ್ತರಿಸಲಾಗುತ್ತಿದೆ.ರಾಜ್ಯಾದ್ಯಂತ ಪ್ರಾಥಮಿಕ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳು, ತಾಲೂಕು ಆಸ್ಪತ್ರೆಗಳು ಮತ್ತು ಬಸ್ ಡಿಪೋಗಳಲ್ಲಿ ಕಣ್ಣಿನ ವಕ್ರೀಕಾರಕ ದೋಷಗಳು ಮತ್ತು ರೆಟಿನೋಪತಿಗಳಂತಹ ಸಮಸ್ಯೆಗಳಿಗೆ ಉಚಿತ ನೇತ್ರ ತಪಾಸಣೆ ನಡೆಸಲು ಸಜ್ಜುಗೊಳಿಸಲಾಗುತ್ತಿದೆ.

## ಪ್ರಮುಖ ಸುದ್ದಿ

### ಕುಡಿಯುವ ನೀರುನ್ನು ವ್ಯರ್ಥ ಮಾಡದೆ ಮಿತವಾಗಿ ಬಳಕೆ ಮಾಡುಲು ಮನವಿ ಮಾಡಿದ ಪುರಸಭೆ

# ನೀರನ್ನು ವ್ಯರ್ಥ ಮಾಡುವುದು ಕಂಡುಬಂದಲ್ಲಿ ದಂಡ

» **ಹೊಸದುರ್ಗ**

ಪಟ್ಟಣದಲ್ಲಿ 23 ವಾರ್ಡ್‌ಗಳಿದ್ದು ಸುಮಾರು 35000 ಜನ ವಾಸವಾಗಿದ್ದು ಕುಡಿಯುವ ನೀರಿಗಾಗಿ ಕೆಲ್ಲೋಡು ಬ್ಯಾರೇಜ್ ಮುಖಾಂತರ ನೀರನ್ನು ಸರಬರಾಜು ಮಾಡಲಾಗುತ್ತಿದ್ದು ಚಿತ್ರದುರ್ಗ ಜಿಲ್ಲೆಯ 6 ತಾಲ್ಲೂಕುಗಳನ್ನು ಬರ ಪೀಡಿತ ತಾಲ್ಲೂಕುಗಳೆಂದು ಘೋಷಣೆ ಮಾಡಿದ್ದು ಸಾರ್ವಜನಿಕರಿಗೆ ಕುಡಿಯುವ ನೀರಿಗೆ ತೊಂದರೆಯಾಗದಂತೆ ಸಮರ್ಪಕವಾಗಿ ಪೂರೈಕೆ ಮಾಡಲು ಶಾಸಕರು ಹಾಗೂ ಪುರಸಭಾ ಸದಸ್ಯರು ನೀಡಿರುವ ನಿರ್ದೇಶನದಂತೆ ಪಟ್ಟಣದ ಸಾರ್ವಜನಿಕರಿಗೆ ಮುಂದಿನ 1 ತಿಂಗಳಿಗೆ ಕೆಲ್ಲೋಡು ಬ್ಯಾರೇಜಿನಲ್ಲಿ ಲಭ್ಯವಿರುವ ನೀರನ್ನು ಪೂರೈಸಲಾಗುವುದು ಎಂದು ಪುರಸಭಾ ಮುಖ್ಯಾಧಿಕಾರಿ ತಿಮ್ಮರಾಜು ಜಿ.ವಿ.ತಿಳಿಸಿದರು.



ಶುಕ್ರವಾರ ಪಟ್ಟಣದ ಪುರಸಭೆಯಲ್ಲಿ ಆಯೋಜಿಸಲಾಗಿದ್ದ ಸರ್ವ ಸದಸ್ಯರ ತುರ್ತು ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು.

ನಂತರ ದಿನಗಳಿಗೆ ಆಡಳಿತಾಧಿಕಾರಿಗಳು ಹಾಗೂ ಉಪ ವಿಭಾಗಾಧಿಕಾರಿ ಚಿತ್ರದುರ್ಗ ಮತ್ತು ಪುರಸಭಾ ಸದಸ್ಯರೊಂದಿಗೆ ಸಮಾಲೋಚಿಸಿ ಬೋರ್‌ವೆಲ್ ಮತ್ತು ಟ್ಯಾಂಕರ್ ಮೂಲಕ ಸರಬರಾಜು ಮಾಡಲಾಗುವುದು ಎಂದರು.

ಸಾರ್ವಜನಿಕರು ನೀರನ್ನು ಪೋಲು ಅಥವಾ ವ್ಯರ್ಥ ಮಾಡದೆ ಮಿತವಾಗಿ ಅವಶ್ಯಕತೆಗೆ ಅನುಗುಣವಾಗಿ ಬಳಸುವುದು ಜೋತೆಗೆ ವಾಹನಗಳನ್ನು ತೊಳೆಯುವುದು, ಮನೆ ಮುಂಭಾಗ ನೀರಿನಿಂದ ಸ್ವಚ್ಛತೆ ಮಾಡುವುದು, ಗಿಡ ಗಂಟೆಗಳಿಗೆ ಹೆಚ್ಚಾಗಿ ನೀರು ಬಳಸುವುದನ್ನು ಕಡಿಮೆ ಮಾಡಿ ಪುರಸಭೆಯೊಂದಿಗೆ ಕೈಜೋಡಿಸಲು ಮನವಿ ಮಾಡಿದ ಅವರು ಇದನ್ನು ಉಲ್ಲಂಘಿಸಿ ನೀರನ್ನು ವ್ಯರ್ಥ ಮಾಡುವುದು ಕಂಡುಬಂದಲ್ಲಿ ಸಾರ್ವಜನಿಕರು ಪುರಸಭೆಯಿಂದ ತೆರೆಯುವ ಸಹಾಯವಾಣಿಗೆ ದೂರು ನೀಡಿದಲ್ಲಿ ದಂಡವನ್ನು ಸಹ ವಿಧಿಸಲಾಗುವುದು ಎಂಬ ವಿಚಾರವನ್ನು ತಿಳಿಸಿದರು.

ಕಿರಿಯ ಅಭಿಯಂತರ ವೆಂಕಟೇಶಲು ಮಾತನಾಡಿ ಕೆಲ್ಲೋಡಿನ ಬ್ಯಾರೇಜ್ ಸಮೀಪದಲ್ಲಿ ಇಟಾಚಿ ಬಳಸಿ ನೀರಿನ ಕೆಳ ಭಾಗದಲ್ಲಿ ಹೆಪ್ಪುಗಟ್ಟಿರುವ ಕೆನೆ ಪದರಗಳನ್ನು ತೆರವುಗೊಳಿಸಲಾಗುವುದು ಹಾಗೂ ಎರಡು ಮುದ್ದೆ ಅಥವಾ ಮರಳು ಬೋರ್‌ಗಳನ್ನು ಕೊರೆದು ಪೈಪ್‌ಲೈನ್ ಅಳವಡಿಸಿ ಜ್ಯಾಕ್‌ವೆಲ್‌ಗೆ ಪಂಪ್ ಮಾಡಿ ಸಮಪರ್ಕವಾಗಿ ನೀರನ್ನು ಪೂರೈಸಲು ಕ್ರಮವಹಿಸಲಾಗುತ್ತಿದ್ದು ಯೋಜನಾ ನಿರ್ದೇಶಕರು, ಜಿಲ್ಲಾಧಿಕಾರಿಗಳು ನಿರ್ದೇಶನದಂತೆ ನೀರಿನ ಗುಣಮಟ್ಟವನ್ನು ವಾರಕ್ಕೊಮ್ಮೆ ಪರೀಕ್ಷಿಸಲಾಗುತ್ತಿದೆ ಹಾಗೂ 17 ಶುದ್ಧ ಕುಡಿಯುವ ನೀರಿನ ಘಟಕಗಳ ಮೂಲಕ ಕುಡಿಯಲು ಯೋಗ್ಯವಿರುವ ನೀರನ್ನು ಪೂರೈಸಲಾಗುವುದು ಎಂದರು.

ಈಸಭೆಯಲ್ಲಿಪುರಸಭಾಸದಸ್ಯರುಗಳಾದ ಎಂ. ಶ್ರೀನಿವಾಸ್. ಜಾಫರ್‌ಸಾಧಿಕ್ ರಾಮಚಂದ್ರಪ್ಪ, ಪ್ರಶಾಂತ್, ಶಂಕರಪ್ಪ, ನಾಗರಾಜ್, ಶ್ರೀಮತಿ ಸರೋಜಮ್ಮ ಮತ್ತಿತರರು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T